ಸಂಪಾದಕರು : ಎ.ಕೆ ಮಲ್ಲಿಕಾರ್ಜುನ ▪ ಸಂಪುಟ : 01 ▪ ಸಂಚಿಕೆ : 32 ▪ ಪುಟ : 04 ▪ ಬೆಲೆ : 02 ▪ 08-07-2026 ▪ ಬುಧವಾರ ▪ ಬಳ್ಳಾರಿ

ಕನ್ನಡ ದಿನಪತ್ರಿಕೆ

# ಗಣಿನಾಡ ವಾಣಿ

GANINAADA VAANI

E-mail : ganinaadavaani@gmail.com RNI No: KNKAN/26/A0397

ಸುದ್ದಿ ಹಾಗೂ ಆಕರ್ಷಕ ವಿನ್ಯಾಸದ ಜಾಹೀರಾತುಗಳಿಗಾಗಿ ಸಂಪರ್ಕಿಸಿ
9743034347
9900966891

2 ದೇಶದ ಸಮಗ್ರ ಅಭಿವೃದ್ಧಿಯಲ್ಲಿ ಸಹಕಾರ ಸಂಘಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ : ಪಿ. ಮೂಕಯ್ಯಸ್ವಾಮಿ

3 ಜೋತು ಬಿದ್ದ ವಿದ್ಯುತ್ ತಂತಿಗಳು : ಸರಿಪಡಿಸದ ಜೆಸ್ಕಾಂ ಅಧಿಕಾರಿಗಳು : ಆತಂಕದಲ್ಲಿ ನಿವಾಸಿಗಳ ಬದುಕು

4 ಹಂಪಿ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಶೇಷ ಆದ್ಯತೆ : ಕೆ.ಜೆ.ಜಾರ್ಜ್

## ಬಳ್ಳಾರಿ: ಸಹಾಯಕ ವಾಣಿಜ್ಯ ತೆರಿಗೆ ಆಯುಕ್ತ ಲೋಕಾಯುಕ್ತ ಬಲೆಗೆ

### ೯೦ ಸಾವಿರ ರೂ. ಲಂಚ ಸ್ವೀಕರಿಸುತ್ತಿದ್ದಾಗ ದಸ್ತಗಿರಿ




▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಜಿ.ಎಸ್.ಟಿ ವರ್ಗಾವಣೆ ಕೆಲಸ ಮಾಡಿಕೊಡಲು ಲಂಚಕ್ಕೆ ಬೇಡಿಕೆ ಇಟ್ಟಿದ್ದ ಬಳ್ಳಾರಿಯ ವಾಣಿಜ್ಯ ತೆರಿಗೆ ಇಲಾಖೆಯ ಸಹಾಯಕ ವಾಣಿಜ್ಯ ತೆರಿಗೆ ಆಯುಕ್ತ ಮಲ್ಲಿಕಾರ್ಜುನ ಕುಬಸದ ಅವರು ಮಂಗಳವಾರ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ಆರೋಪಿತ ಅಧಿಕಾರಿಯು ಕಚೇರಿಯ ಒಳಗೆ ಫಿರ್ಯಾದಿದಾರರಿಂದ ಲಂಚದ ಹಣ ಪಡೆಯುತ್ತಿದ್ದಾಗ ದಾಳಿ ನಡೆಸಿದ ಲೋಕಾಯುಕ್ತ ಅಧಿಕಾರಿಗಳು ಅವರನ್ನು ರೆಡ್-ಹ್ಯಾಂಡ್ ಆಗಿ ದಸ್ತಗಿರಿ ಮಾಡಿದ್ದಾರೆ.

**ಪ್ರಕರಣದ ಹಿನ್ನೆಲೆ:**

ಸಿರುಗುಪ್ಪದ 12ನೇ ವಾರ್ಡ್, ವಿಜಯ ವಿಠಲ ನಗರದ ನಿವಾಸಿಯಾದ ಕೆ.ಶ್ರೀನಿವಾಸರಾವ್ ಅವರು ತೆರಿಗೆ ಸಲಹೆಗಾರರು ಮತ್ತು ಅಕೌಂಟೆಂಟ್ ಆಗಿ ಕೆಲಸ ಮಾಡುತ್ತಿದ್ದಾರೆ. ಸಿರುಗುಪ್ಪದ ಶ್ರೀ ಮಹಾಲಕ್ಷ್ಮಿ ಎಂಟರ್‌ಪ್ರೈಸಸ್ ಮಾಲೀಕರಾದ ಕೆ.ಮಲ್ಲಿಕಾರ್ಜುನ ಅವರಿಗೆ ಸಂಬಂಧಿಸಿದ ಹಳೆಯ ಜಿ.ಎಸ್.ಟಿಸಂಖ್ಯೆ(29ಬಿಜಿಸಿಪಿಎಂ8288ಡಿ1ಜೆಡ್0) ತಾಂತ್ರಿಕ ದೋಷದಿಂದ ಮೈಗ್ರೇಟ್ ಆಗಿರಲಿಲ್ಲ. ಈ ಹಳೆಯ ಜಿ.ಎಸ್.ಟಿ ಖಾತೆಯಲ್ಲಿದ್ದ ಇನ್‌ಪುಟ್ ಟ್ಯಾಕ್ಸ್ ಅನ್ನು ಹೊಸ ಜಿ.ಎಸ್.ಟಿ ಸಂಖ್ಯೆಗೆ (29ಬಿಜಿಸಿಪಿಎಂ8288ಡಿ2ಜೆಡ್‌ಜೆಡ್) ಸೇರಿಸಿಕೊಡುವಂತೆ ಶ್ರೀನಿವಾಸರಾವ್ ಅವರು ವಾಣಿಜ್ಯ ತೆರಿಗೆ ಇಲಾಖೆಗೆ ಅರ್ಜಿ ಸಲ್ಲಿಸಿದ್ದರು.

ಈ ಸರ್ಕಾರಿ ಕೆಲಸವನ್ನು ಮಾಡಿಕೊಡಲು ಬಳ್ಳಾರಿಯ ಎಲ್.ಜಿ.ಎಸ್.ಟಿ.ಓ 495ರ ಸಹಾಯಕ ವಾಣಿಜ್ಯ ತೆರಿಗೆ ಆಯುಕ್ತ ಮಲ್ಲಿಕಾರ್ಜುನ ಕುಬಸದ ಅವರು ರೂ.90,000 ರೂಪಾಯಿಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದರು. ಲಂಚ ನೀಡಲು ಇಚ್ಛಿಸದ ಶ್ರೀನಿವಾಸರಾವ್ ಅವರು ಈ ಕುರಿತು ಬಳ್ಳಾರಿ ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ದೂರಿನ ಅನ್ವಯ ಅಪರಾಧ ಸಂಖ್ಯೆ: 08/2026, ಕಲಂ 7(ಎ) ಪಿಸಿ ಆಕ್ಟ್ 1988 (ತಿದ್ದುಪಡಿ ಕಾಯ್ದೆ-2018) ರ ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು.

**ಲೋಕಾಯುಕ್ತ ಯಶಸ್ವಿ ಕಾರ್ಯಾಚರಣೆ:**

ಶುಕ್ರವಾರ ಮಧ್ಯಾಹ್ನ ಸುಮಾರು 1.40 ಗಂಟೆಗೆ ಬಳ್ಳಾರಿ ನಗರದ ರಾಘವೇಂದ್ರ ಕಾಲೋನಿಯಲ್ಲಿರುವ ವಾಣಿಜ್ಯ ತೆರಿಗೆ ಇಲಾಖೆಯ ಕಚೇರಿಯ ಒಳಗಡೆ ಆರೋಪಿತ ಅಧಿಕಾರಿ ಮಲ್ಲಿಕಾರ್ಜುನ ಕುಬಸದ ಅವರು ಪಿರ್ಯಾದಿದಾರರಿಂದ 90,000 ರೂ.ಗಳ ಲಂಚದ ಹಣವನ್ನು ಪಡೆಯುತ್ತಿದ್ದಾಗ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ. ಲಂಚದ ಹಣವನ್ನು ಜಪ್ತಿ ಮಾಡಿಕೊಳ್ಳಲಾಗಿದ್ದು, ಅಧಿಕಾರಿಯನ್ನು ಕಚೇರಿಯಲ್ಲಿಯೇ ದಸ್ತಗಿರಿ ಮಾಡಲಾಗಿದೆ.

ಈ ಯಶಸ್ವಿ ಕಾರ್ಯಾಚರಣೆಯು ಬಳ್ಳಾರಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎನ್. ವಾಸುದೇವರಾಮ ಅವರ ಮಾರ್ಗದರ್ಶನದಲ್ಲಿ ಹಾಗೂ ಬಳ್ಳಾರಿ ಲೋಕಾಯುಕ್ತ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕ ಗುರಣ್ಣ ಎಸ್ ಹೆಬ್ಬಾಳ್ ಅವರ ನೇತೃತ್ವದಲ್ಲಿ ನಡೆದಿದೆ. ತಂಡದಲ್ಲಿ ಪೊಲೀಸ್ ಉಪಾಧೀಕ್ಷಕ ಸಚಿನ್ ಎಸ್. ಚಲುವಾದಿ (ಕಲೋ, ಹೊಸಪೇಟೆ), ಪೊಲೀಸ್ ನಿರೀಕ್ಷಕ ಸುರೇಶ್ ಎಮ್. ಭಾವಿಮನಿ ಮತ್ತು ಸಿಬ್ಬಂದಿಗಳಾದ ಚಂದ್ರಶೇಖರ್, ವಸಂತಕುಮಾರ, ಅರವಿಂದ, ಅಂಜಿನಪ್ಪ, ಹನುಮಂತಪ್ಪ ಹಾಗೂ ಗೊಲ್ಲರ ದಾಸಪ್ಪ ಭಾಗವಹಿಸಿದ್ದರು.

### ಬಳ್ಳಾರಿ ಜಿಲ್ಲಾ ಆಸ್ಪತ್ರೆಗೆ ಆರೋಗ್ಯ ಅಧಿಕಾರಿಗಳ ಭೇಟಿ

## ಗರ್ಭಿಣಿಯರು ಹಾಗೂ ನವಜಾತ ಶಿಶುಗಳ ಆರೋಗ್ಯ ರಕ್ಷಣೆಗೆ ಜಾಗೃತಿ ಕರೆ : ಡಿಹೆಚ್ಓ

▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಜಿಲ್ಲಾ ಆಸ್ಪತ್ರೆಯ ತಾಯಿ ಮತ್ತು ಮಕ್ಕಳ ಆರೋಗ್ಯ ವಿಭಾಗಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಎನ್. ಬಸರೆಡ್ಡಿ, ಬಳ್ಳಾರಿ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಆರ್. ಅಬ್ದುಲ್ಲಾ ಮತ್ತು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವಿ. ಪೂಜಾರ್ ಅವರು ಜಂಟಿಯಾಗಿ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿದ್ದ ತಾಯಂದಿರನ್ನುದ್ದೇಶಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು ಅವರು, ಗರ್ಭಿಣಿಯರು, ಬಾಣಂತಿಯರು ಮತ್ತು ನವಜಾತ ಶಿಶುಗಳ ಆರೈಕೆ ಹಾಗೂ ಆರೋಗ್ಯದ ಕುರಿತು ಸವಿಸ್ತಾರವಾದ ಮಾಹಿತಿ ನೀಡಿ ಜಾಗೃತಿ ಮೂಡಿಸಿದರು.

**ಕಡ್ಡಾಯವಾಗಿ ಮಾಡಿಸಬೇಕಾದ 4 ಆರೋಗ್ಯ ತಪಾಸಣೆಗಳು:**

ಗರ್ಭಿಣಿಯರು ಹೆರಿಗೆಗೆ ಮುನ್ನ ಕಡ್ಡಾಯವಾಗಿ 4 ಬಾರಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಮೊದಲನೇ ತಪಾಸಣೆ (ಮೊದಲ 3 ತಿಂಗಳು) ಗರ್ಭಧಾರಣೆ ಖಚಿತವಾದ ತಕ್ಷಣ (12 ವಾರಗಳ ಒಳಗೆ) ಮೂಲ ವಿವರಗಳ ದಾಖಲಾತಿಗಾಗಿ, ಎರಡನೇ ತಪಾಸಣೆ (4 ರಿಂದ 6 ನೇ ತಿಂಗಳು) 14 ರಿಂದ 26 ನೇ ವಾರದ ಅವಧಿಯಲ್ಲಿ ಮಗುವಿನ ಬೆಳವಣಿಗೆ ಗಮನಿಸಲು, ಮೂರನೇ ತಪಾಸಣೆ (7 ಮತ್ತು 8 ನೇ ತಿಂಗಳು) 28 ರಿಂದ 34 ನೇ ವಾರದಲ್ಲಿ ತಾಯಿಯ ರಕ್ತದೊತ್ತಡ ಅಥವಾ ಮಧುಮೇಹದ ಲಕ್ಷಣಗಳನ್ನು ಪರೀಕ್ಷಿಸಲು, ನಾಲ್ಕನೇ ತಪಾಸಣೆ (9 ನೇ ತಿಂಗಳು) 36 ನೇ ವಾರದಿಂದ ಹೆರಿಗೆಯಾಗುವವರೆಗಿನ ಅವಧಿಯಲ್ಲಿ ಹೆರಿಗೆಯ ಸಿದ್ಧತೆಗಾಗಿ ತಪಾಸಣೆ ಮಾಡಿಸಬೇಕು ಎಂದರು.



**ಸಾಮಾನ್ಯ ಪರೀಕ್ಷೆಗಳು:** ಪ್ರತಿ ತಪಾಸಣೆಯಲ್ಲೂ ತಾಯಿಯ ತೂಕ (ಗರ್ಭಾವಸ್ಥೆಯಲ್ಲಿ ಸರಾಸರಿ 10-12 ಕೆಜಿ ಹೆಚ್ಚಾಗಬೇಕು), ರಕ್ತದೊತ್ತಡ (ಬಿಪಿ), ಹೊಟ್ಟೆಯ ಗಾತ್ರ ಮತ್ತು ಭ್ರೂಣದ ಹೃದಯ ಬಡಿತವನ್ನು ಕಡ್ಡಾಯವಾಗಿ ಪರಿಶೀಲಿಸಲಾಗುತ್ತದೆ.

**ಪ್ರಯೋಗಾಲಯ ಪರೀಕ್ಷೆಗಳು ಮತ್ತು ಸ್ಕ್ಯಾನಿಂಗ್ ಮಹತ್ವ:** ರಕ್ತಹೀನತೆ ಪತ್ತೆಗೆ ಹಿಮೋಗ್ಲೋಬಿನ್ ಪರೀಕ್ಷೆ, ಬ್ಲಡ್ ಗ್ರೂಪ್ ತಪಾಸಣೆ, ಎಚ್.ಐ.ವಿ, ಹೆಪಟೈಟಿಸ್ ಬಿ, ಸಿಫಿಲಿಸ್ ಹಾಗೂ ಮಧುಮೇಹ ಮತ್ತು ಮೂತ್ರದ ಸೋಂಕು ಪತ್ತೆಹಚ್ಚಲು ಅಗತ್ಯ ಲ್ಯಾಬ್ ಪರೀಕ್ಷೆಗಳನ್ನು ಮಾಡಿಸಲಾಗುತ್ತದೆ. ಇದರೊಂದಿಗೆ ಪ್ರಮುಖವಾಗಿ 3 ಅಲ್ಟ್ರಾಸೌಂಡ್ ಸ್ಕ್ಯಾನಿಂಗ್‌ಗಳನ್ನು ಶಿಫಾರಸು ಮಾಡಲಾಗುತ್ತದೆ.

**ಔಷಧಗಳು, ಲಸಿಕೆಗಳು:**

ಧನುರ್ವಾಯು ತಡೆಯಲು 2 ಡೋಸ್ ಟಿ.ಡಿ ಲಸಿಕೆ ನೀಡಲಾಗುತ್ತದೆ. ಗರ್ಭಧಾರಣೆಯ 4 ನೇ ತಿಂಗಳಿನಿಂದ ಹೆರಿಗೆಯ ನಂತರದ 6 ತಿಂಗಳವರೆಗೆ ದಿನಕ್ಕೆ ಒಂದು ಐರನ್ ಮಾತ್ರೆ ಹಾಗೂ ಮಗುವಿನ ಮೂಳೆಗಳ ಬೆಳವಣಿಗೆಗೆ ಕ್ಯಾಲ್ಸಿಯಂ ಮಾತ್ರೆಗಳನ್ನು ನೀಡಲಾಗುತ್ತದೆ. ಕಬ್ಬಿಣಾಂಶ ಮತ್ತು ಕ್ಯಾಲ್ಸಿಯಂ ಮಾತ್ರೆಗಳ ಸೇವನೆಯ ನಡುವೆ ಕನಿಷ್ಠ 2 ಗಂಟೆಗಳ ಅಂತರವಿರಬೇಕು.

ತಾಯಿಗೆ ತೀವ್ರ ಹೊಟ್ಟೆನೋವು, ಯೋನಿಯಿಂದ ರಕ್ತಸ್ರಾವ, ತಲೆಸುತ್ತು, ಮುಖ-ಕೈಕಾಲುಗಳಲ್ಲಿ ಹಠಾತ್ ಊತ, ದೃಷ್ಟಿ ಮಸುಕಾಗುವುದು, ನೀರು ಒಡೆಯುವುದು, ಜ್ವರ ಅಥವಾ ಮಗುವಿನ ಚಲನೆ ಕಡಿಮೆಯಾದಲ್ಲಿ ತಕ್ಷಣವೇ ಆಸ್ಪತ್ರೆಗೆ ಧಾವಿಸಬೇಕು ಎಂದು ಎಚ್ಚರಿಸಿದರು.

### ಗರ್ಭಿಣಿ ಮತ್ತು ಬಾಣಂತಿಯರ ಆರೋಗ್ಯ ಹಾಗೂ ಪೌಷ್ಟಿಕಾಂಶ

ಗರ್ಭಾವಸ್ಥೆಯಲ್ಲಿ ಮತ್ತು ಹೆರಿಗೆಯ ನಂತರ ತಾಯಿಯ ದೈಹಿಕ ಹಾಗೂ ಮಾನಸಿಕ ಆರೋಗ್ಯವು ಮಗುವಿನ ಮೇಲೆ ನೇರ ಪರಿಣಾಮ ಬೀರುತ್ತದೆ. ಹೀಗಾಗಿ ತಾಯಂದಿರು ಪ್ರೋಟೀನ್, ಕ್ಯಾಲ್ಸಿಯಂ, ಕಬ್ಬಿಣಾಂಶ (ಐರನ್) ಮತ್ತು ಫೋಲಿಕ್ ಆಸಿಡ್ ಸಮೃದ್ಧವಾಗಿರುವ ಹಸಿರು ಎಲೆ ತರಕಾರಿಗಳು, ಹಾಲು, ಮೊಟ್ಟೆ, ಧಾನ್ಯಗಳು ಹಾಗೂ ಹಣ್ಣುಗಳನ್ನು ಹೆಚ್ಚಾಗಿ ಸೇವಿಸಬೇಕು. ಪ್ರತಿದಿನ 2 ರಿಂದ 3 ಲೀಟರ್ ನೀರು ಕುಡಿಯಬೇಕು. ತಾಯಿಗೆ ಕನಿಷ್ಠ 7 ರಿಂದ 9 ಗಂಟೆಗಳ ಉತ್ತಮ ನಿದ್ರೆ ಹಾಗೂ ಮಾನಸಿಕ ಒತ್ತಡವಿಲ್ಲದ ಸಂತೋಷದ ವಾತಾವರಣ ಅತ್ಯಗತ್ಯ. ಮಲಗುವಾಗ ಎಡಬದಿಗೆ ಮಲಗುವುದು ರಕ್ತಸಂಚಾರಕ್ಕೆ ಸಹಕಾರಿಯಾಗಿದೆ. ವೈದ್ಯರ ಸಲಹೆಯಿಲ್ಲದೆ ಯಾವುದೇ ಔಷಧಿಗಳನ್ನು ಸೇವಿಸಬಾರದು ಹಾಗೂ ಧೂಮಪಾನ, ಮದ್ಯಪಾನಗಳಿಂದ ದೂರವಿರಬೇಕು ಎಂದು ಅಧಿಕಾರಿಗಳು ತಿಳಿಸಿದರು.

### ನವಜಾತ ಶಿಶು ಮತ್ತು ಮಕ್ಕಳ ಆರೋಗ್ಯ ಆರೈಕೆ

ಮಗು ಹುಟ್ಟಿದ ಮೊದಲ ಒಂದು ಗಂಟೆಯೊಳಗೆ 'ಕೊಲೆಸ್ಟ್ರಮ್' (ಗಿಣ್ಣು ಹಾಲು) ನೀಡಬೇಕು. ಮೊದಲ 6 ತಿಂಗಳವರೆಗೆ ಮಗುವಿಗೆ ಕೇವಲ ಎದೆಹಾಲು ಮಾತ್ರ ನೀಡಬೇಕು, ನೀರನ್ನೂ ಕೊಡುವ ಅಗತ್ಯವಿರುವುದಿಲ್ಲ. 6 ತಿಂಗಳ ನಂತರ ಎದೆಹಾಲಿನೊಂದಿಗೆ ರಾಗಿ ಸರಿ, ಕಿಚಡಿ, ಹಣ್ಣುಗಳ ಪ್ಯೂರಿಯಂತಹ ಮೃದು ಆಹಾರ ನೀಡಬೇಕು. ಸರ್ಕಾರದ ವೇಳಾಪಟ್ಟಿಯಂತೆ ಕಾಮಾಲೆ, ಪೋಲಿಯೋ, ಬಿಸಿಜಿ, ದಡಾರ ಮುಂತಾದ ಮಾರಕ ಕಾಯಿಲೆಗಳ ವಿರುದ್ಧ ಸಕಾಲದಲ್ಲಿ ಲಸಿಕೆ ಹಾಕಿಸಬೇಕು. ಮಗುವನ್ನು ಮುಟ್ಟುವ ಮುನ್ನ ಕೈಗಳನ್ನು ತೊಳೆದುಕೊಂಡು ಸ್ವಚ್ಛತೆ ಕಾಪಾಡಬೇಕು ಎಂದು ಅಧಿಕಾರಿಗಳು ತಾಯಂದಿರಿಗೆ ಮನವರಿಕೆ ಮಾಡಿಕೊಟ್ಟರು.

---

### ಚರಂಡಿ ಸಮಸ್ಯೆ ಕುರಿತು ಪ್ರಕಟವಾದ ವರದಿ ಪರಿಣಾಮ : ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ಪಿಡಿಓ ಪರಶುರಾಮ ನಾಯಕ್




▪ **ಗಣಿನಾಡವಾಣಿ ವಾರ್ತೆ, ಕುಕನೂರ**

ಕುದರಿಮೋತಿ ಗ್ರಾಮದ 3ನೇ ವಾರ್ಡ್‌ನಲ್ಲಿ ಚರಂಡಿ ಸ್ವಚ್ಛತೆ ನಿರ್ಲಕ್ಷ್ಯ ಹಾಗೂ ಕಸದ ರಾಶಿಯಿಂದ ಸಾರ್ವಜನಿಕರು ಎದುರಿಸುತ್ತಿದ್ದ ಸಮಸ್ಯೆಯ ಕುರಿತು ಪ್ರಕಟವಾದ ಪತ್ರಿಕೆ ವರದಿಯ ಪರಿಣಾಮವಾಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪರಶುರಾಮ ನಾಯಕ್ ಇಂದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸ್ಥಳಕ್ಕೆ ಭೇಟಿ ನೀಡಿದ ಪಿಡಿಓ ಪರಶುರಾಮ ನಾಯಕ್ ಅವರು ಚರಂಡಿ ಹಾಗೂ ಕಸದ ರಾಶಿಯನ್ನು ಪರಿಶೀಲಿಸಿ, ಸಾರ್ವಜನಿಕರಿಂದ ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದರು. ತಕ್ಷಣವೇ ಅಗತ್ಯ ಸ್ವಚ್ಛತಾ ಕಾರ್ಯ ಕೈಗೊಂಡು ಸಮಸ್ಯೆಯನ್ನು ಶೀಘ್ರದಲ್ಲಿ ಪರಿಹರಿಸುವಂತೆ ಸಂಬಂಧಿಸಿದ ಸಿಬ್ಬಂದಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಸ್ಥಳೀಯ ನಿವಾಸಿಗಳು ಹಾಗೂ ಪರಶುರಾಮ ಭಜೇಂತ್ರಿ ಅವರು ವಾರ್ಡ್‌ನಲ್ಲಿ ಚರಂಡಿಗಳ ಸ್ವಚ್ಛತೆ ನಿಯಮಿತವಾಗಿ ನಡೆಯದೇ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಅಧಿಕಾರಿಗಳ ಗಮನಕ್ಕೆ ತಂದರು. ಸ್ವಚ್ಛತಾ ಕಾರ್ಯವನ್ನು ನಿರಂತರವಾಗಿ ನಡೆಸಿ ಗ್ರಾಮದಲ್ಲಿ ಉತ್ತಮ ನೈರ್ಮಲ್ಯ ಕಾಪಾಡುವಂತೆ ಅವರು ಮನವಿ ಮಾಡಿದರು.ಸ್ಥಳ ಪರಿಶೀಲನೆಯಿಂದ ಸಮಸ್ಯೆ ಶೀಘ್ರ ಪರಿಹಾರವಾಗಲಿದೆ ಎಂಬ ನಿರೀಕ್ಷೆಯನ್ನು ಗ್ರಾಮಸ್ಥರು ವ್ಯಕ್ತಪಡಿಸಿದ್ದಾರೆ.

### ನಾಳೆ ಅಲ್ಪಸಂಖ್ಯಾತರ ಸಮುದಾಯದ ಸಾರ್ವಜನಿಕ ಕುಂದುಕೊರತೆ ಸಭೆ

▪ **ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**

ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಅಧ್ಯಕ್ಷರಾದ ಯು.ನಿಸಾರ್ ಅಹಮದ್ ಅವರ ಅಧ್ಯಕ್ಷತೆಯಲ್ಲಿ ಇದೇ ಜುಲೈ 09ರಂದು ಮಧ್ಯಾಹ್ನ 12ಕ್ಕೆ ಚಿತ್ರದುರ್ಗ ನಗರದ ಸಭಾಂಗಣದಲ್ಲಿ "ಅಲ್ಪಸಂಖ್ಯಾತ ಸಮುದಾಯದ ಸಾರ್ವಜನಿಕ ಕುಂದು ಕೊರತೆ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

## ಖಾಸಗಿ ಸಹಭಾಗಿತ್ವ ಹಾಗೂ ವಾಯು-ರೈಲು ಸಂಪರ್ಕ ಸುಧಾರಣೆಯೊಂದಿಗೆ ರಾಜ್ಯದ 50 ಪ್ರವಾಸಿ ತಾಣಗಳಿಗೆ ಕಾಯಕಲ್ಪ : ಸಚಿವ ಕೆ.ಜೆ.ಜಾರ್ಜ್

▪ **ಗಣಿನಾಡವಾಣಿ ವಾರ್ತೆ, ವಿಜಯನಗರ**

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ 50 ಜಾಗತಿಕ ಪ್ರವಾಸಿ ತಾಣಗಳ ಅಭಿವೃದ್ಧಿ ಯೋಜನೆಯಡಿ ಕರ್ನಾಟಕದ ಐತಿಹಾಸಿಕ ತಾಣಗಳಾದ ಹಂಪಿ, ಮೈಸೂರು ಮತ್ತು ಲಕ್ಕುಂಡಿ ಕ್ಷೇತ್ರಗಳನ್ನು ಜಾಗತಿಕ ಮಟ್ಟದ ಪ್ರವಾಸಿ ಕೇಂದ್ರಗಳನ್ನಾಗಿ ಪರಿವರ್ತಿಸಲು ರಾಜ್ಯ ಪ್ರವಾಸೋದ್ಯಮ ಇಲಾಖೆ ತೀವ್ರ ಸಿದ್ಧತೆ ನಡೆಸಿದೆ. ರಾಜ್ಯದ ಪ್ರವಾಸೋದ್ಯಮದ ಸರ್ವತೋಮುಖ ಬೆಳವಣಿಗೆಗೆ ಖಾಸಗಿ ಸಹಭಾಗಿತ್ವ ಅತ್ಯಗತ್ಯ ಎಂದು ಇಂಧನ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು.

ನಗರದ ಹೊಸ ಮಲಪನಗುಡಿಯಲ್ಲಿನ ಹೆರಿಟೇಜ್ ರೆಸಾರ್ಟ್‌ನಲ್ಲಿ ಮಂಗಳವಾರ ಜಿಲ್ಲಾಡಳಿತ ಹಾಗೂ ಪ್ರವಾಸೋದ್ಯಮ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಗ್ಲೋಬಲ್ ಡೆಸ್ಟಿನೇಷನ್ ಡೆವಲಪ್‌ಮೆಂಟ್ ಯೋಜನೆಯಡಿ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವ ಕುರಿತು ರಾಜ್ಯ ಮಟ್ಟದ ಸಮಾಲೋಚನಾ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜಾಗತಿಕ ಪ್ರವಾಸಿ ತಾಣಗಳ ಪಟ್ಟಿಗೆ ಕರ್ನಾಟಕದಿಂದ ಮೂರು ಪ್ರಮುಖ ಐತಿಹಾಸಿಕ ಮತ್ತು ಸಾಂಸ್ಕೃತಿಕ ಕೇಂದ್ರಗಳನ್ನು ಪ್ರಸ್ತಾಪಿಸಲಾಗಿದೆ. ಯುನೆಸ್ಕೋ ಜಾಗತಿಕ ಪಾರಂಪರಿಕ ತಾಣವಾಗಿರುವುದರಿಂದ ಹಂಪಿಗೆ ಪ್ರಥಮ ಆದ್ಯತೆ ನೀಡಲಾಗಿದ್ದು,ಇದನ್ನುಭಾರತದಪ್ರವಾಸೋದ್ಯಮದ ಪ್ರಮುಖ ಹೆಗ್ಗುರುತನ್ನಾಗಿ ರೂಪಿಸಲಾಗುವುದು. ಈಗಾಗಲೇ ಸಾಂಸ್ಕೃತಿಕ ರಾಜಧಾನಿಯಾಗಿ ಚಿರಪರಿಚಿತವಿರುವ ಮೈಸೂರನ್ನು ಮತ್ತಷ್ಟು ಆಧುನಿಕ ಸೌಲಭ್ಯಗಳೊಂದಿಗೆ ಪ್ರವಾಸೋದ್ಯಮದ ಬೃಹತ್ ಹಬ್ ಆಗಿ ಬಲಪಡಿಸಲಾಗುವುದು. ಪ್ರಸ್ತುತ ಭಾರತೀಯ ಪುರಾತತ್ವ ಇಲಾಖೆಯಿಂದ ವ್ಯಾಪಕ ಉತ್ಖನನ ಕಾರ್ಯಗಳು ನಡೆಯುತ್ತಿದ್ದು, ಕಲ್ಯಾಣಿ ಚಾಲುಕ್ಯರ ಶೈಲಿಯ ಲಕ್ಕುಂಡಿ ತಾಣವನ್ನು ಭವಿಷ್ಯದ ಪ್ರಮುಖ ಪ್ರವಾಸಿ ಆಕರ್ಷಣೆಯನ್ನಾಗಿ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗುವುದು.

ಹಂಪಿ ಸೇರಿದಂತೆ ಪ್ರಮುಖ ಪಾರಂಪರಿಕ ತಾಣಗಳಲ್ಲಿ ಜಿಲ್ಲಾಡಳಿತ, ರಾಜ್ಯ ಪುರಾತತ್ವ ಇಲಾಖೆ ಮತ್ತು ಕೇಂದ್ರ ಪುರಾತತ್ವ ಸರ್ವೇಕ್ಷಣಾ ಇಲಾಖೆ (ಎಎಸ್ಐ) ಗಳ ನಡುವಿನ ಆಡಳಿತಾತ್ಮಕ ವಿಳಂಬವನ್ನು ತಪ್ಪಿಸಲು, ಡೆಸ್ಟಿನೇಶನ್ ಮ್ಯಾನೇಜ್‌ಮೆಂಟ್ ಆರ್ಗನೈಸೇಶನ್ ರಚಿಸುವ ಕುರಿತು ಕೇಂದ್ರ ಸರ್ಕಾರದೊಂದಿಗೆ ಮಾತುಕತೆ ನಡೆಸಲಾಗುತ್ತಿದೆ. ಇದು ಪ್ರವಾಸೋದ್ಯಮ ಉದ್ಯಮದ ಹೂಡಿಕೆದಾರರಿಗೆ ಹಾಗೂ ಪ್ರವಾಸಿಗರಿಗೆ ಎದುರಾಗುವ ಗೊಂದಲಗಳ ನಿವಾರಿಸಲಿದೆ.



ಪ್ರವಾಸಿಗರ ಸುಗಮ ಸಂಚಾರ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ವಿಶೇಷ ಒತ್ತು ನೀಡುವುದರ ಜತೆಗೆ ಹೊಸಪೇಟೆ, ಬಳ್ಳಾರಿ ಭಾಗದ ಜಿಂದಾಲ್ ವಿಮಾನ ನಿಲ್ದಾಣದ ರನ್‌ವೇ ವಿಸ್ತರಿಸಲು ಸೂಕ್ತ ಕ್ರಮ ವಹಿಸಲಾಗುವುದು. ಇದರೊಂದಿಗೆ, ದೇಶದ ಪ್ರಮುಖ ನಗರಗಳಿಂದ ಕರಾವಳಿ ಮತ್ತು ಉತ್ತರ ಕರ್ನಾಟಕದ ಐತಿಹಾಸಿಕ ತಾಣಗಳಿಗೆ ಸಂಪರ್ಕ ಕಲ್ಪಿಸುವ ರೈಲುಗಳ ಸಂಖ್ಯೆಯನ್ನು ಹೆಚ್ಚಿಸಲು ಕೇಂದ್ರ ರೈಲ್ವೆ ಸಚಿವಾಲಯಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು. **ಖಾಸಗಿ ವಲಯದೊಂದಿಗೆ ಸಹಭಾಗಿತ್ವ:** ಪ್ರವಾಸೋದ್ಯಮ ಕ್ಷೇತ್ರದಲ್ಲಿ ಕರ್ನಾಟಕವು ಜಗತ್ತಿನಲ್ಲೇ ಅತ್ಯುತ್ತಮ ಸಾಮರ್ಥ್ಯ ಹೊಂದಿದೆ. ಕೆಎಸ್‌ಟಿಡಿಸಿ ಮತ್ತು ಜಂಗಲ್ ಲಾಡ್ಜಸ್ ಸಂಸ್ಥೆಗಳು ಉತ್ತಮ ಕೆಲಸ ಮಾಡುತ್ತಿದ್ದರೂ, ಖಾಸಗಿ ಹೂಡಿಕೆದಾರರ ಸಕ್ರಿಯ ಪಾಲ್ಗೊಳ್ಳುವಿಕೆಯಿಲ್ಲದೆ ಪ್ರವಾಸೋದ್ಯಮದ ಕ್ರಿಯಾತ್ಮಕ ಬದಲಾವಣೆ ಸಾಧ್ಯವಿಲ್ಲ. ಸರ್ಕಾರ ಮತ್ತು ಖಾಸಗಿ ಪಾಲುದಾರರು ಒಟ್ಟಾಗಿ ಒಂದು ತಂಡವಾಗಿ ಕೆಲಸ ಮಾಡಿ ಕರ್ನಾಟಕದ ವರ್ಚಸ್ಸನ್ನು ಜಾಗತಿಕ ಮಟ್ಟದಲ್ಲಿ ಹೆಚ್ಚಿಸಬೇಕಿದೆ ಎಂದರು.

ಶಾಸಕ ಹೆಚ್.ಆರ್. ಗವಿಯಪ್ಪ ಮಾತನಾಡಿ, ಹಂಪಿಯ ಸುಮಾರು 1200ಕ್ಕೂ ಹೆಚ್ಚು ಸ್ಮಾರಕಗಳನ್ನು ಒಳಗೊಂಡಂತೆ ಪ್ರವಾಸಿಗರಿಗಾಗಿ ಸುಸಜ್ಜಿತವಾದ 15.4 ಕಿ.ಮೀ ಉದ್ದದ ಪ್ರದಕ್ಷಿಣಾ ಪಥ ನಿರ್ಮಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಹೆರಿಟೇಜ್ ವಾಕ್ ಮೂಲಕ ಪ್ರವಾಸಿಗರಿಗೆ ಹಂಪಿಯ ವೈಭವವನ್ನು ಹತ್ತಿರದಿಂದ ವೀಕ್ಷಿಸಲು ಅನುಕೂಲವಾಗಲಿದೆ. ಹಂಪಿ ಸ್ಮಾರಕಗಳ ದೀರ್ಘಾವಧಿ ರಕ್ಷಣೆಗಾಗಿ ಭಾರತೀಯ ಪುರಾತತ್ವ ಸಮೀಕ್ಷೆ ಸಹಯೋಗದೊಂದಿಗೆ ವೈಜ್ಞಾನಿಕ ದಸ್ತಾವೇಜೀಕರಣ ಮತ್ತು ಡಿಜಿಟಲ್ ಪ್ರಿಸರ್ವೇಶನ್ ಯೋಜನೆಗೆ ಚಾಲನೆ ನೀಡಲು ಚಿಂತನೆ ನಡೆಸಲಾಗಿದೆ ಎಂದರು.

ಹಂಪಿ ಮತ್ತು ಬಳ್ಳಾರಿ ರೈಲ್ವೆ ನಿಲ್ದಾಣಗಳನ್ನು ಪಾರಂಪರಿಕ ನಿಲ್ದಾಣಗಳಾಗಿ ಅಭಿವೃದ್ಧಿಪಡಿಸಲಾಗುತ್ತಿದ್ದು, ಹಂಪಿ ನಿಲ್ದಾಣಕ್ಕೆ ವಿಶ್ವಪ್ರಸಿದ್ಧ ವಿರೂಪಾಕ್ಷ ದೇವಸ್ಥಾನದ ಶೈಲಿಯ ಪಾರಂಪರಿಕ ನೋಟ ನೀಡಲು ಈಗಾಗಲೇ ಕ್ರಮ ವಹಿಸಲಾಗಿದೆ. ಕಮಲಾಪುರದ ಐತಿಹಾಸಿಕ ಕೆರೆಯ ಸೌಂದರ್ಯೀಕರಣಕ್ಕಾಗಿ ಕೆರೆಯ ಸುತ್ತಲೂ ಸಂಪೂರ್ಣವಾಗಿ ಒಂದು ಪ್ರವಾಸಿ ಸರ್ಕ್ಯೂಟ್ ನಿರ್ಮಿಸಲು ಯೋಜನೆ ರೂಪಿಸಲಾಗಿದೆ. ಅದಷ್ಟೇ ಅಲ್ಲದೇ ಪ್ರವಾಸಿಗರಿಗೆ ಹಂಪಿಯ ಸಮಗ್ರ ಐತಿಹಾಸಿಕ ಮಾಹಿತಿ ನೀಡಲು ಅಂತಾರಾಷ್ಟ್ರೀಯ ಗುಣಮಟ್ಟದ ಇಂಟರ್‌ಪ್ರಿಟೇಷನ್ ಸೆಂಟರ್ ಹಾಗೂ ಪ್ರವಾಸೋದ್ಯಮ ಕ್ಷೇತ್ರಕ್ಕೆ ಉತ್ತೇಜನ ನೀಡಲು ಅಂತಾರಾಷ್ಟ್ರೀಯ ಪ್ರವಾಸೋದ್ಯಮ ಕಾಲೇಜು ಆರಂಭಿಸುವ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ಮಾತನಾಡಿ, ಪ್ರವಾಸೋದ್ಯಮದ ಜಾಗತಿಕ ಗುಣಮಟ್ಟದಲ್ಲಿ ಕಾಂಬೋಡಿಯಾ ಅಥವಾ ಶ್ರೀಲಂಕಾದಂತಹ ದೇಶಗಳಿಗೆ ಹೋಲಿಸಿದರೆ ನಾವು ಹಿಂದುಳಿದಿದ್ದು, ಆಡಳಿತಾತ್ಮಕ ವ್ಯವಸ್ಥೆಯನ್ನು ಸುಧಾರಿಸುವುದು ಇಂದಿನ ತುರ್ತು ಅಗತ್ಯವಾಗಿದೆ. ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳ ನಡುವಿನ ಸಮನ್ವಯ ಕೊರತೆಯಿಂದ ಕಡತಗಳು ವಿಳಂಬವಾಗುತ್ತಿದ್ದು, ಹೂಡಿಕೆದಾರರನ್ನು ಆಕರ್ಷಿಸಲು ತಕ್ಷಣವೇ ಸಿಂಗಲ್ ವಿಂಡೋ ಸಿಸ್ಟಮ್ ಜಾರಿಗೆ ತರಬೇಕು ಎಂದರು.

ಪ್ರಸ್ತುತ ಹಂಪಿಯ ಹೋಟೆಲ್ ಹಾಗೂ ಪ್ರವಾಸೋದ್ಯಮಉದ್ಯಮಗಳಲ್ಲಿಹೊರರಾಜ್ಯದವರೇ ಹೆಚ್ಚಾಗಿ ಕೆಲಸ ಮಾಡುತ್ತಿದ್ದು, ಸ್ಥಳೀಯ ಗ್ರಾಮೀಣ ಯುವಕರಿಗೆ ಉದ್ಯೋಗ ಸಿಗುವಂತಾಗಲು ಕೌಶಲ್ಯ ತರಬೇತಿ ಕೇಂದ್ರವನ್ನು ಆರಂಭಿಸಬೇಕು. ಹಂಪಿ, ಕಮಲಾಪುರ ಸೇರಿದಂತೆ ಸುತ್ತಮುತ್ತಲಿನ 30ಕ್ಕೂ ಹೆಚ್ಚು ಹಿಂದುಳಿದ ಹಳ್ಳಿಗಳಲ್ಲಿ ಬಯಲು ಶೌಚ ಮುಕ್ತ ಪರಿಸರ ನಿರ್ಮಾಣ, ಕುಡಿಯುವ ನೀರು ಮತ್ತು ನೈರ್ಮಲ್ಯ ವ್ಯವಸ್ಥೆಯನ್ನು ಸುಧಾರಿಸಲು ಲಭ್ಯವಿರುವ ಅನುದಾನವನ್ನು ಜಿಲ್ಲಾಡಳಿತ ಹಾಗೂ ಸ್ಥಳೀಯ ಶಾಸಕರು ಜಂಟಿಯಾಗಿ ಸಮರ್ಪಕವಾಗಿ ಬಳಸಿಕೊಳ್ಳಬೇಕಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಆನಂದ್ ಸಿಂಗ್, ಪ್ರವಾಸೋದ್ಯಮ ಇಲಾಖೆ ಸರ್ಕಾರದ ಕಾರ್ಯದರ್ಶಿ ಡಾ.ಕೆ.ವಿ.ತ್ರಿಲೋಕ್ ಚಂದ್ರ, ಪ್ರವಾಸೋದ್ಯಮ ಇಲಾಖೆ ಜಂಟಿ ಕಾರ್ಯದರ್ಶಿ ಸುವಾಸಿಶ್ ದಾಸ್, ಪ್ರವಾಸೋದ್ಯಮ ಇಲಾಖೆ ಆಯುಕ್ತ ಡಾ.ವಿ.ರಾಮ್ ಪ್ರಸಾತ್ ಮನೋಹರ್, ಅಪರ ಜಿಲ್ಲಾಧಿಕಾರಿ ಈ.ಬಾಲಕೃಷ್ಣ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ, ಉಪವಿಭಾಗಾಧಿಕಾರಿ ಪಿ.ವಿವೇಕಾನಂದ, ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ಪ್ರಭುಲಿಂಗ ಎಸ್. ತಳಕೇರಿ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಉದ್ಯಮ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಚಿತ್ರದುರ್ಗದಲ್ಲಿ ಜು.18ರಂದು ಭೋವಿ ಜನೋತ್ಸವ : ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಿಕೆಗೆ ಕರೆ




**▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಭೋವಿ ಜಿಲ್ಲಾ ಸಂಘಟನೆಯ ವತಿಯಿಂದ ನಗರದ ಪರಾವತಿ ನಗರದ ಖಾಸಗಿ ಬಾಲ ರೆಸಿಡೆನ್ಸಿ ಹೋಟೆಲ್‌ನಲ್ಲಿ ಶ್ರೀ ಸಿದ್ಧರಾಮೇಶ್ವರ ಜಯಂತಿ ಹಾಗೂ ಜುಲೈ 18ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಭೋವಿ ಜನೋತ್ಸವದ ಪೂರ್ವಭಾವಿ ಸಭೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ರಾಯಚೂರಿನ ಅಶೋಕ್ ಅಮುನೂಟ್ ಅವರು, ಕಲ್ಯಾಣ ಕರ್ನಾಟಕ ಭಾಗ ಸೇರಿದಂತೆ ಬಳ್ಳಾರಿ ಜಿಲ್ಲೆಯಿಂದ ಭೋವಿ ಸಮಾಜದ ಹೆಚ್ಚಿನ ಸಂಖ್ಯೆಯ ಜನರು ಚಿತ್ರದುರ್ಗದಲ್ಲಿ ನಡೆಯುವ ಭೋವಿ ಜನೋತ್ಸವದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ ಹಾಗೂ ಯಾವುದೇ ಪದವಿ ಪರೀಕ್ಷೆಗಳಲ್ಲಿ 90 ಶೇಕಡಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಭೋವಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಕಾರ್ಯಕ್ರಮದಲ್ಲಿ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯದ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಸೇರಿದಂತೆ ಹಲವು ಗಣ್ಯರು ಭಾಗವಹಿಸುವ ನಿರೀಕ್ಷೆಯಿದ್ದು, ಸುಮಾರು ಒಂದೂವರೆ ಲಕ್ಷಕ್ಕೂ ಹೆಚ್ಚು ಜನರು ಸೇರುವ ಸಾಧ್ಯತೆ ಇದೆ ಎಂದು ಸಂಘಟನೆಯ ಮುಖಂಡರು ತಿಳಿಸಿದರು.

ಸಭೆಯಲ್ಲಿ ಜಿಲ್ಲೆಯ ವಿವಿಧ ಭಾಗಗಳ ಭೋವಿ ಸಮಾಜದ ಮುಖಂಡರು, ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದು, ಕಾರ್ಯಕ್ರಮದ ಯಶಸ್ಸಿಗಾಗಿ ಅಗತ್ಯ ಸಿದ್ಧತೆಗಳ ಕುರಿತು ಚರ್ಚಿಸಿದರು.

# ದೇಶದ ಸಮಗ್ರ ಅಭಿವೃದ್ಧಿಯಲ್ಲಿ ಸಹಕಾರ ಸಂಘಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ : ಪಿ. ಮೂಕಯ್ಯಸ್ವಾಮಿ

**▪ ಗಣಿನಾಡವಾಣಿ ವಾರ್ತೆ, ಕಂಪ್ಲಿ**

ದೇಶದ ಸಮಗ್ರವಾದ ಅಭಿವೃದ್ಧಿಯಲ್ಲಿ ಸಹಕಾರ ಸಂಘಗಳ ಪಾತ್ರವು ಅತ್ಯಂತ ಮಹತ್ವದ್ದಾಗಿದೆ ಎಂದು ಅಪೆಕ್ಸ್ ಬ್ಯಾಂಕ್ ನಿರ್ದೇಶಕ ಪಿ.ಮೂಕಯ್ಯಸ್ವಾಮಿ ತಿಳಿಸಿದರು.

ಅವರು ಪಟ್ಟಣದ ವೀರಶೈವ ಸಂಘದ ಶಾರದಾ ಶಾಲೆ ಆವರಣದಲ್ಲಿ ಸ್ಥಳೀಯ ವರಲಕ್ಷ್ಮೀ ಕ್ರೆಡಿಟ್ ಸಹಕಾರ ಸಂಘ, ರಾಜ್ಯ ಸಹಕಾರ ಮಹಾಮಂಡಳಿ, ಸಹಕಾರ ಇಲಾಖೆ, ಜಿಲ್ಲಾ ಸಹಕಾರ ಯೂನಿಯನ್ನ ಹಯೋಗದಲ್ಲಿ ಏರ್ಪಡಿಸಿದ್ದ ಅಂತರಾಷ್ಟ್ರೀಯ ಸಹಕಾರದಿನದ ಅಂಗವಾಗಿ ಏರ್ಪಡಿಸಿದ್ದ ಕ್ಷೇತ್ರ ಕುರಿತ ಅರಿವು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ದೇಶದಲ್ಲಿ 8.52. ಲಕ್ಷ ಸಹಕಾರ ಸಂಘಗಳಿದ್ದು, 32 ಕೋಟಿ ಜನ ಸದಸ್ಯರಿದ್ದಾರೆ. ಸಹಕಾರಿ ಸಂಘಗಳಿಂದ ದೇಶದ ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ವರದಾನವಾಗಿದೆ, ಕೇಂದ್ರದಿಂದ ನೇರವಾಗಿ ರೈತರಿಗೆ ಏಕರೂಪದಲ್ಲಿ ಸಾಲ ವಿತರಿಸುವ ಯೋಜನೆ ಮೂಲಕ ಅಭಿವೃದ್ಧಿಗೆ ಒತ್ತು



ನೀಡಲು ಉದ್ದೇಶಿಸಲಾಗಿದೆ. ದೇಶದಲ್ಲಿ 2 ಲಕ್ಷ ಹೊಸ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಗ್ರಾಮೀಣ ಪ್ರದೇಶದಲ್ಲಿ ಆರಂಭಿಸಲು ಕೇಂದ್ರ ಸಹಕಾರ ಇಲಾಖೆ ಯೋಜನೆ ರೂಪಿಸಿದೆ ಎಂದರು.

ಅಂತರಾಷ್ಟ್ರೀಯ ಸಹಕಾರ ದಿನದ ಸ್ಮರಣಾರ್ಥ ಸಸಿಗಳನ್ನು ಅವರಣದಲ್ಲಿ ನೆಡಲಾಯಿತು.

ವರಲಕ್ಷ್ಮೀ ಸಹಕಾರ ಸಂಘದ ಅಧ್ಯಕ್ಷ ಎಚ್.ಜಗದೀಶ್ ಅಧ್ಯಕ್ಷತೆವಹಿಸಿದ್ದರು. ಕಾರ್ಯಕ್ರಮದಲ್ಲಿ ಜಿಲ್ಲಾ ಸಸಹಕಾರ ಯೂನಿಯನ್ ನಿರ್ದೇಶಕ ಎಚ್.ವೀರಶೇಖರಗೌಡ, ಬಳ್ಳಾರಿ ವಿಜಯನಗರ ಜಿಲ್ಲೆಗಳ ಸಹಕಾರ ಸಂಘಗಳ ಉಪನಿಬಂಧಕ ಜೆ. ಎಂ.ವೀರಭದ್ರಯ್ಯ, ಉಪನ್ಯಾಸಕ ಕೆ.ಎಚ್. ಮಂಜುನಾಥ್, ವರಲಕ್ಷ್ಮೀ ಸಹಕಾರ ಸಂಘದ ಮುಖ್ಯಕಾರ್ಯನಿರ್ವಾಹಕ ಲೋಕೇಶ್ರೆಡ್ಡಿ, ಸಹಕಾರ ಸಂಘಗಳ ವ್ಯವಸ್ಥಾಪಕರು, ನಿರ್ದೇಶಕರು, ಸಿಬ್ಬಂದಿಗಳು ಭಾಗವಹಿಸಿದ್ದರು.

# ಎಲೆಕ್ಟ್ರೀಕಲ್ ಮೋಟಾರ್ ರಿವೈಂಡಿಂಗ್ ಮತ್ತು ಪಂಪ್‌ಸೆಟ್ ರಿಪೇರಿ ತರಬೇತಿ : ಜುಲೈ 11 ರಂದು ಸಂದರ್ಶನ

**▪ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**

ಚಿತ್ರದುರ್ಗ ನಗರದ ಬ್ಯಾಂಕ್ ಕಾಲೋನಿಯಲ್ಲಿರುವ ರುಡ್ ಸೆಟ್ ಸಂಸ್ಥೆ ವತಿಯಿಂದ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ ಯುವತಿಯರಿಗಾಗಿ ಸ್ವ ಉದ್ಯೋಗ ಮಾಡಲು ಎಲೆಕ್ಟ್ರೀಕಲ್ ಮೋಟಾರ್ ರಿವೈಂಡಿಂಗ್ ಮತ್ತು ಪಂಪ್‌ಸೆಟ್ ರಿಪೇರಿ ತರಬೇತಿಗೆ ಇದೇ ಜುಲೈ 11 ರಂದು ಸಂದರ್ಶನ ಆಯೋಜಿಸಲಾಗಿದೆ. ಆಸಕ್ತರು ನೇರವಾಗಿ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ.

ತರಬೇತಿಯ ಅವಧಿ 30 ದಿನಗಳಾಗಿದ್ದು, ಊಟ ಮತ್ತು ವಸತಿ ಸಹಿತವಾಗಿ ಸಂಪೂರ್ಣ ಉಚಿತವಾಗಿರುತ್ತದೆ. 19 ರಿಂದ 45 ವರ್ಷದೊಳಗಿನ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಕನ್ನಡ ಓದಲು ಬರೆಯುವ ಜ್ಞಾನ ಹೊಂದಿರಬೇಕು. ತರಬೇತಿಗೆ ಸಂಬಂಧಿಸಿದಂತೆ ಪ್ರಾಥಮಿಕ ಜ್ಞಾನ ಹೊಂದಿದ್ದು, ಉದ್ಯೋಗ ಮಾಡಬೇಕೆಂಬ ಆಸಕ್ತಿ ಹೊಂದಿರಬೇಕು.

ಆಸಕ್ತರು ತಮ್ಮ ತಮ್ಮ ಮೊಬೈಲ್ ನಂಬರ್‌ವುಳ್ಳ ಸ್ವವಿಳಾಸದ ಅರ್ಜಿಯೊಂದಿಗೆ, ಆಧಾರ್ ಕಾರ್ಡ್, ರೇಷನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಪ್ರತಿಗಳೊಂದಿಗೆ ಇದೇ ಜುಲೈ 11ರಂದು ರುಡ್‌ಸೆಟ್ ಸಂಸ್ಥೆಯಲ್ಲಿ ನೇರವಾಗಿ ಸಂದರ್ಶನದಲ್ಲಿ ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಮೊ.8431329162, 861828445, 8660627785 ಅನ್ನು ಸಂಪರ್ಕಿಸಬಹುದು ಎಂದು ಚಿತ್ರದುರ್ಗ ರುಡ್‌ಸೆಡ್ ಸಂಸ್ಥೆಯ ನಿರ್ದೇಶಕರು ತಿಳಿಸಿದ್ದಾರೆ.

# ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಒಲಿಂಪಿಯಾಡ್ ಪರೀಕ್ಷೆ ಸಹಕಾರಿ

**▪ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**

ವಿದ್ಯಾರ್ಥಿಗಳಿಗೆ ಭವಿಷ್ಯದಲ್ಲಿ ಬರುವಂತಹ ದೊಡ್ಡ ದೊಡ್ಡ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಆತ್ಮವಿಶ್ವಾಸದಿಂದ ಎದುರಿಸಲು ಉತ್ತಮ ಅಡಿಪಾಯವಾಗಲಿದ್ದು ಒಲಿಂಪಿಯಾಡ್ ಪರೀಕ್ಷೆ ತುಂಬಾ ಸಹಕಾರಿಯಾಗಲಿದೆ ಎಂದು ಕ್ಷೇತ್ರ ಧರ್ಮಸ್ಥಳ ಗ್ರಾಮೀಣ ಯೋಜನೆ ಬಿ.ಸಿ.ಟ್ರಸ್ಟ್ ಪ್ರಾದೇಶಿಕ ಕಚೇರಿಯ ಸಿಎಸ್‌ಸಿ ಯೋಜನಾಧಿಕಾರಿ ವಿಘ್ನೇಶ್ ಡಿ ಕಾಮತ್ ಹೇಳಿದರು.

ಇತ್ತೀಚೆಗೆ ನಗರದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣ ಯೋಜನೆ ಬಿ.ಸಿ.ಟ್ರಸ್ಟ್ ಯೋಜನಾ ಕಚೇರಿಯಲ್ಲಿ, ಆನ್‌ಲೈನ್ ಒಲಿಂಪಿಯಾಡ್ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ತಾಲ್ಲೂಕಿನ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಸಿ ಅವರು ಮಾತನಾಡಿದರು.

ಒಲಂಪಿಯಾಡ್ ಪರೀಕ್ಷೆಯು 3 ರಿಂದ 12ನೇ ತರಗತಿಯ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ಅತ್ಯಂತ ಪ್ರಮುಖ ಹಾಗೂ ವಿಶೇಷ ಸ್ಪರ್ಧಾತ್ಮಕ ಪರೀಕ್ಷೆಯಾಗಿದೆ. ಈ ಪರೀಕ್ಷೆಯು ಕೇವಲ ಶಾಲಾ ಪಠ್ಯಕ್ರಮಕ್ಕೆ ಮಾತ್ರ ಸೀಮಿತವಾಗಿಲ್ಲ. ಬದಲಾಗಿ, ವಿದ್ಯಾರ್ಥಿಗಳಲ್ಲಿ ಅಡಗಿರುವ ನೈಜ ಪ್ರತಿಭೆಯನ್ನು ಗುರುತಿಸಿ, ಅವರಲ್ಲಿ ಆಳವಾದ ಜ್ಞಾನ ಮತ್ತು ಸಮಸ್ಯೆಗಳನ್ನು ಪರಿಹರಿಸುವ



ವಿಶಿಷ್ಟ ಕೌಶಲ್ಯವನ್ನು ಬೆಳೆಸುವ ನಿಟ್ಟಿನಲ್ಲಿ ಇದನ್ನು ವಿನ್ಯಾಸಗೊಳಿಸಲಾಗಿದೆ. ಇದು ವಿದ್ಯಾರ್ಥಿಗಳನ್ನು ಜಾಗತಿಕ ಮಟ್ಟದ ಸ್ಪರ್ಧೆಗಳಿಗೆ ಸಿದ್ಧಗೊಳಿಸುತ್ತದೆ ಎಂದರು.

ಚಿತ್ರದುರ್ಗ ಯೋಜನಾ ಕಚೇರಿಯ ಕ್ಷೇತ್ರ ಯೋಜನಾಧಿಕಾರಿ ಚಂದ್ರಹಾಸ್.ಬಿ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ ಸಿ ಟ್ರಸ್ಟ್ (ರಿ) ಚಿತ್ರದುರ್ಗ ಯೋಜನಾ ಕಚೇರಿಯ ಸಿಎಸ್‌ಸಿ (CSC) ಸೇವಾ ಕೇಂದ್ರದ ವತಿಯಿಂದ ಆಯೋಜಿಸಲಾಗಿದ್ದ ಒಲಂಪಿಯಾಡ್ ವಿಶೇಷ ಪರೀಕ್ಷೆಯಲ್ಲಿ ತಾಲ್ಲೂಕಿನ ಸರ್ಕಾರಿ ಹಾಗೂ ಖಾಸಗಿ ಶಾಲೆಯ ಒಟ್ಟು 1550 ವಿದ್ಯಾರ್ಥಿಗಳು ಅತ್ಯಂತ ಉತ್ಸಾಹದಿಂದ ಪಾಲ್ಗೊಂಡಿದ್ದರು.

ಇದರಲ್ಲಿ ಶೇಕಡಾ 80ಕ್ಕೂ ಹೆಚ್ಚು ಅಂಕಗಳನ್ನು ಗಳಿಸಿ ಗಣನೀಯ ಸಾಧನೆ ತೋರಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಮೂಲಕ ಒಲಿಂಪಿಯಾಡ್ ಸರ್ಟಿಫಿಕೇಟ್‌ಗಳನ್ನು ಅಧಿಕೃತವಾಗಿ ವಿತರಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಚಿತ್ರದುರ್ಗ ತಾಲೂಕು ನೋಡಲ್ ಅಧಿಕಾರಿಯಾದ ಶಿವರಾಜ್ ನಾಯ್ಕ್, ಚಿತ್ರದುರ್ಗ ತಾಲೂಕಿನ ಸಿಎಸ್‌ಸಿ ಸೇವಾದಾರರು, ಒಲಿಂಪಿಯಾಡ್ ಪರೀಕ್ಷೆ ಬರೆದ ನೂರಾರು ವಿದ್ಯಾರ್ಥಿಗಳು ಹಾಗೂ ಅವರ ಹೆಮ್ಮೆಯ ಪೋಷಕರು ಉಪಸ್ಥಿತರಿದ್ದರು.

# ಡೆಂಗ್ಯು ನಿಯಂತ್ರಣಕ್ಕೆ 50 ಸ್ವಯಂ ಸೇವಕರ ನೇಮಕ : ಅರ್ಜಿ ಆಹ್ವಾನ

**▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಪ್ರಸ್ತಕ ಸಾಲಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ 'ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಕ್ರಮ'ದಡಿ ಬಳ್ಳಾರಿ ನಗರ ಪ್ರದೇಶದಲ್ಲಿ ಡೆಂಗ್ಯು ರೋಗ ನಿಯಂತ್ರಣ ಚಟುವಟಿಕೆಯಾದ ಲಾರ್ವಾ ಉತ್ಪತ್ತಿ ತಾಣಗಳ ನಿರ್ಮೂಲನಾ ಕಾರ್ಯ ಹಾಗೂ ಸಮೀಕ್ಷೆಯನ್ನು ನಡೆಸಲು 50 ಸ್ವಯಂ ಸೇವಕರ ಸೇವೆಯ ಅವಶ್ಯಕತೆ ಇದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**ಅರ್ಹತೆ:** ಅಭ್ಯರ್ಥಿಗಳು ಕನಿಷ್ಠ ಎಸ್‌ಎಸ್‌ಎಲ್‌ಸಿ ವಿದ್ಯಾಹರ್ತೆಯನ್ನು ಹೊಂದಿರಬೇಕು. ಲಾರ್ವಾ ಸಮೀಕ್ಷೆ ಚಟುವಟಿಕೆಯ ನಮೂನೆಯನ್ನು ಭರ್ತಿ ಮಾಡಲು ಶಕ್ತರಾಗಿರಬೇಕು. ಕ್ರಿಯಾ ಯೋಜನೆಯ ಅನುಸಾರ ವೇಳಾಪಟ್ಟಿಯಂತೆ ತಪ್ಪದೇ ಎಲ್ಲಾ ಚಟುವಟಿಕೆಗಳಿಗೆ ಹಾಜರಾಗಬೇಕು. ಒಂದು ದಿನಕ್ಕೆ ಕನಿಷ್ಠ 60 ರಿಂದ 65 ಆವರಣಗಳನ್ನು (ಮನೆ, ಕಚೇರಿ, ಆಸ್ಪತ್ರೆ, ಶಾಲೆ, ಕಾಲೇಜು ಇತ್ಯಾದಿ) ಸಂದರ್ಶಿಸಿ, ಈಡೀಸ್ ಲಾರ್ವಾ ಉತ್ಪತ್ತಿ ತಾಣ ನಾಶ ಚಟುವಟಿಕೆಯನ್ನು ನಡೆಸಬೇಕು.

ದೈನಂದಿನ ಹಾಜರಿ ಮತ್ತು ಸಮೀಕ್ಷೆಯ ಜಿಯೋಟ್ಯಾಗ್ ಫೋಟೋಗಳೊಂದಿಗೆ ನಿಗದಿತ ವರದಿಯನ್ನು ಕಚೇರಿಗೆ ಸಲ್ಲಿಸುವುದು ಕಡ್ಡಾಯವಾಗಿದೆ. ಪ್ರತಿ ಸ್ವಯಂ ಸೇವಕರಿಗೆ ಸೇವೆಯನ್ನು ಗರಿಷ್ಠ 100 ದಿನಗಳಿಗೆ ನಿಗದಿಪಡಿಸಲಾಗಿರುತ್ತದೆ. ಸ್ವಯಂ ಸೇವಕರಿಗೆ ನಿಗದಿಪಡಿಸಿರುವ ಗೌರವಧನವನ್ನು ಪ್ರತಿ ದಿನ ಒಂದಕ್ಕೆ ರೂ. 400 ಗಳಂತೆ ನಿಯಮಾನುಸಾರ ಪಾವತಿಸಲಾಗುವುದು.

ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂ. 08392294610 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವಿಬಿಡಿಸಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನರಿದ್ದಲ್ಲಿಗೇ ಕಲೆ, ಕಲಾವಿದರನ್ನು ಕೊಂಡೊಯ್ಯುವ ಯೋಜನೆ ಶ್ಲಾಘನೀಯ

**▪ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**

ಜನರಿದ್ದಲ್ಲಿಗೇ ಕಲೆಯನ್ನು ಹಾಗೂ ಕಲಾವಿದರನ್ನು ಕೊಂಡೊಯ್ಯುವ ಮೂಲಕ ನಾಡಿನ ವೈವಿಧ್ಯಮಯ ಕಲೆಗಳನ್ನು ಪರಿಚಯಿಸುವ 'ಕಲಾ ನಡಿಗೆ ನಿಮ್ಮ ಬಳಿಗೆ' ಯೋಜನೆ ಸಾರ್ವಜನಿಕರಿಗೆ ಅತ್ಯಂತ ಸಹಕಾರಿಯಾಗಿದೆ ಎಂದು ಉಪವಿಭಾಗಾಧಿಕಾರಿ ಡಾ. ಕೆ.ಜೆ. ಕಾಂತರಾಜ್ ಹೇಳಿದರು.

ನಗರದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಭಾನುವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ 'ಕಲಾ ನಡಿಗೆ ನಿಮ್ಮ ಬಳಿಗೆ' ಎನ್ನುವ ವಿಶಿಷ್ಟ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆಧುನಿಕ ಜೀವನ ಶೈಲಿಯ ಪ್ರಭಾವದಿಂದಾಗಿ ಜನರು ತಮ್ಮ ಕಲೆ, ಸಂಸ್ಕೃತಿ ಹಾಗೂ ಪರಂಪರೆ ಮರೆಯುತ್ತಿರುವುದು ವಿಷಾದನೀಯ. ಪ್ರತಿಯೊಬ್ಬರು ನಮ್ಮ ಸಂಸ್ಕೃತಿ ಉಳಿಸಿ ಬೆಳೆಸುವ ಕಾರ್ಯದಲ್ಲಿ ಕೈಜೋಡಿಸಬೇಕು ಎಂದರು.




ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಿ.ಎಂ. ಗುರುನಾಥ್ ಮಾತನಾಡಿ, ಇದುವರೆಗೂ ನಾವು ಕಲೆಯನ್ನು ಆಸ್ವಾದಿಸಲು ಹಾಗೂ ಕಲಾವಿದರನ್ನು ನೋಡಲು ಅವರು ಇರುವ ಸ್ಥಳಕ್ಕೆ ಹುಡುಕಿಕೊಂಡು ಹೋಗಬೇಕಾಗಿತ್ತು. ಆದರೆ, ಈ ಕಾರ್ಯಕ್ರಮದ ಮೂಲಕ ಕಲೆ, ಕಲಾವಿದರು ಸಾರ್ವಜನಿಕರು ಇರುವಲ್ಲಿಗೇ ಬಂದು ಪ್ರದರ್ಶನ ನೀಡುತ್ತಿದ್ದಾರೆ. ಜನರಿಗೆ ಮನರಂಜನೆ ನೀಡುವುದರೊಂದಿಗೆ ನಾಡಿನ ಭವ್ಯ ಸಂಸ್ಕೃತಿ ಪರಿಚಯಿಸುವುದೇ ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದರು.

ಹೆಚ್ಚು ಜನರು ಸೇರುವ ಸಾರ್ವಜನಿಕ ಸ್ಥಳಗಳಲ್ಲಿ ಈ ರೀತಿಯ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಚಿತ್ರದುರ್ಗದ ಐತಿಹಾಸಿಕ ಕೋಟೆ, ಮಾಲ್‌ಗಳು ಹಾಗೂ ಪ್ರಮುಖ ಪಾರ್ಕ್‌ಗಳಲ್ಲಿ ಈ ವಿಶಿಷ್ಟ ಕಲಾ ಪ್ರದರ್ಶನಗಳನ್ನು ಆಯೋಜಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನಾ ಹಾಗೂ ಲೆಕ್ಕ ಪತ್ರ ಇಲಾಖೆಯ ಉಪನಿರ್ದೇಶಕ ಡಾ.ಪ್ರಸನ್ನ ಕುಮಾರ್ ಇದ್ದರು. ಗಂಗಾಧರ್ ಮತ್ತು ಸಂಗಡಿಗರು ಹಾಗೂ ಜಗದೀಶ್ ಮತ್ತು ತಂಡದವರು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅತ್ಯುತ್ತಮವಾಗಿ ನಡೆಸಿಕೊಟ್ಟು, ನೆರೆದಿದ್ದ ಸಾರ್ವಜನಿಕರನ್ನು ರಂಜಿಸಿದರು.

# ಪ್ರಧಾನಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಹ ಮಕ್ಕಳಿಂದ ಅರ್ಜಿ ಆಹ್ವಾನ

**▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಕೇಂದ್ರ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯದ ವತಿಯಿಂದ ನೀಡಲಾಗುವ 2025–26ನೇ ಸಾಲಿನ ಪ್ರತಿಷ್ಠಿತ 'ಪ್ರಧಾನಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ' ಪ್ರಶಸ್ತಿಗೆ ಅರ್ಹ ಮಕ್ಕಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಯಾದ ಸಿಂಧೆ ನಂದಿನಿ ಅವರು ತಿಳಿಸಿದ್ದಾರೆ.

ಧೈರ್ಯ ಮತ್ತು ಸಾಹಸದಿಂದ ಇತರರ ಜೀವ ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಸಂರಕ್ಷಣೆ, ಕಲೆ, ಸಂಸ್ಕೃತಿ ಮತ್ತು ನೂತನ ಆವಿಷ್ಕಾರಗಳ ಮೂಲಕ ಅಸಾಧಾರಣ ಸಾಧನೆ ಮಾಡಿದ ಮಕ್ಕಳನ್ನು ಗುರುತಿಸಿ ಈ ರಾಷ್ಟ್ರೀಯ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುತ್ತದೆ.

ಅರ್ಹ ಹಾಗೂ ಆಸಕ್ತರು ಕೇಂದ್ರ ಸರ್ಕಾರದ ಅಧಿಕೃತ ವೆಬ್‌ಸೈಟ್ https://awards.gov.in ಮೂಲಕ ಜುಲೈ 31 ದಿನಾಂಕದೊಳಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಾಂತಿಧಾಮ ಆವರಣ ಹತ್ತಿರ, ಎನ್.ಸಿ.ಸಿ. ಆವರಣ, ಕಂಟೋನ್ಮೆಂಟ್, ಬಳ್ಳಾರಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ.

ಮಾಹಿತಿಗಾಗಿ ದೂ.08392–241373 ಗೆ ಕರೆಮಾಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಲಿತಕಲಾ ಅಕಾಡೆಮಿಯಿಂದ ಚಿತ್ರಕಲಾ ವಿದ್ಯಾರ್ಥಿಗಳಿಗೆ ವಿಶೇಷ ಸ್ಪರ್ಧೆ

**▪ ಗಣಿನಾಡವಾಣಿ ವಾರ್ತೆ, ಬೆಂಗಳೂರು**

ಕರ್ನಾಟಕ ಲಲಿತಕಲಾ ಅಕಾಡೆಮಿಯು ಪ್ರಪ್ರಥಮ ಬಾರಿಗೆ ಚಿತ್ರಕಲಾ ವಿದ್ಯಾರ್ಥಿಗಳಿಗಾಗಿ ವಿಶೇಷವಾದ ರಾಜ್ಯ ಮಟ್ಟದ ಚಿತ್ರಕಲಾ ಸ್ಪರ್ಧೆಯನ್ನು ಆಯೋಜಿಸಿದೆ.

ಕರ್ನಾಟಕದ ಯಾವುದೇ ಕಲಾ ಶಾಲೆಗಳಲ್ಲಿ ಯಾವುದೇ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಈ ಸ್ಪರ್ಧೆಯ ಮೂಲಕ ಮುಕ್ತ ಅವಕಾಶವನ್ನು ಕಲ್ಪಿಸಿಕೊಡಲಾಗಿದ್ದು, ಅರ್ಜಿ ಸಲ್ಲಿಸಲು 2026 ಆಗಸ್ಟ್ 06 ಕೊನೆಯ ದಿನಾಂಕವಾಗಿದೆ.ಈ ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಛಿಸುವ ವಿದ್ಯಾರ್ಥಿಗಳು ತಾವು ರಚಿಸಿರುವ ಕಲಾಕೃತಿಗಳ 2 ಭಾವಚಿತ್ರಗಳು ಹಾಗೂ ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ಚಿತ್ರಕಲಾ ಶಾಲೆಯ ಪ್ರಾಂಶುಪಾಲರಿಂದ ಪಡೆದ ದೃಢೀಕರಣ ಪತ್ರದೊಂದಿಗೆ ಅರ್ಜಿ ಸಲ್ಲಿಸಬೇಕು.ಗೂಗಲ್ ಫಾರ್ಮ್ ಮೂಲಕ ಆನ್‌ಲೈನ್‌ನಲ್ಲಿ ಅಗತ್ಯ ದಾಖಲೆಗಳನ್ನು ಲಗತ್ತಿಸಿ ಸಲ್ಲಿಸಬೇಕು. ಅಧಿಕೃತ ವೆಬ್‌ಸೈಟ್ www.lalitkala.karnataka.gov.in ಮೂಲಕ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ದೂರವಾಣಿ ಸಂಖ್ಯೆ 080 – 22480297 ಅನ್ನು ಸಂಪರ್ಕಿಸಬಹುದಾಗಿದೆ.

ಸ್ಪರ್ಧೆಗೆ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಪ್ರಕೃತಿಯ ಮಡಿಲಿನಲ್ಲಿ ವಿಶೇಷವಾದ "ಚಿತ್ರಕಲಾ ಶಿಬಿರ" ವನ್ನು ಆಯೋಜಿಸಲಾಗುತ್ತದೆ.

ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕಾಗಿ ಅಕಾಡೆಮಿಯ ರಿಜಿಸ್ಟ್ರಾರ್ ಎನ್. ನಮ್ರತಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಂಪ್ಲಿಗೆ ಭೇಟಿ ನೀಡಿದ ನಟ ಚೇತನ್ : ಪುತ್ಥಳಿಗೆ ಮಾಲಾರ್ಪಣೆ

**▪ ಗಣಿನಾಡವಾಣಿ ವಾರ್ತೆ, ಕಂಪ್ಲಿ**

ಬಡವರ ಹಾಗೂ ಸಮ ಸಮಾಜ ನಿರ್ಮಾಣದ ಪರವಾಗಿ ಹೊಸ ರಾಜಕೀಯ ಪಕ್ಷ ಸ್ಥಾಪಿಸಲು ತೀರ್ಮಾನಿಸಲಾಗಿದೆ' ಎಂದು ನಟ ಚೇತನ್ ಹೇಳಿದರು.

ಪಟ್ಟಣಕ್ಕೆ ಸೋಮವಾರ ಸಂಜೆ ಭೇಟಿ ನೀಡಿ, ಇಲ್ಲಿನ ಸಣಾಪುರ ರಸ್ತೆಯ ಅಂಬೇಡ್ಕರ್ ಕಾಲೋನಿ ಬಳಿಯ ಮುಖ್ಯರಸ್ತೆ ಬದಿಯಲ್ಲಿರುವ ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ್, ಡಾ.ಬಾಬು ಜಗಜೀವನ್ ರಾಮ್ ಪುತ್ಥಳಿಗೆ ಮಾಲಾರ್ಪಣೆ ಅರ್ಪಿಸಿದ ನಂತರ ಅಂಬೇಡ್ಕರ್ ಸಂಘದ ಅಧ್ಯಕ್ಷ ಎಸ್. ರುದ್ರಮುನಿ ನೇತೃತ್ವದಲ್ಲಿ ಅಭಿಮಾನಿಗಳಿಂದ ಸನ್ಮಾನ ಸ್ವೀಕರಿಸಿ ಮಾತನಾಡಿ, ರಾಜ್ಯದಲ್ಲಿ ಜನರ ಸಮಸ್ಯೆಗಳ ನಿವಾರಣೆಯಾಗಬೇಕಾದರೆ ಹೊಸ ರಾಜಕೀಯ ಪಕ್ಷದ ಅವಶ್ಯಕತೆ ಇದೆ'. 'ರಾಜ್ಯದಾದ್ಯಂತ ವಿವಿಧ ಕ್ಷೇತ್ರಗಳಿಗೆ ಪ್ರವಾಸ ಕೈಗೊಂಡು ಹೊಸ ರಾಜಕೀಯ ಪಕ್ಷದ ಸ್ಥಾಪನೆ ಕುರಿತು ಸಮಾನ ಮನಸ್ಕರ ಸಭೆ ನಡೆಸಲಾಗುತ್ತಿದ್ದು, ಉತ್ತಮ ಪ್ರತಿಕ್ರಿಯೆ ದೊರೆಯುತ್ತಿದೆ.



ಅಂಬೇಡ್ಕರ್ ಅವರು ನೀಡಿದ ಸಂವಿಧಾನದಿಂದ ಸಮಾನತೆ, ಮತದಾನದ ಹಕ್ಕು ಸೇರಿದಂತೆ ನಾಡಿನಲ್ಲಿ ಬಹುಜನರ ನೆಮ್ಮದಿಯ ಬದುಕಿಗೆ ಸ್ವತಂತ್ರ ನೀಡಿದ್ದಾರೆ.

ಅವರ ಆದರ್ಶಗಳ ಪರಿಪಾಲಿಸುವ ಮೂಲಕ ಉತ್ತಮ ನಾಗರೀಕರಾಗಿ ಬದುಕು ಕಟ್ಟಿಕೊಳ್ಳೋಣ ಎಂದರು.

ನಂತರ ಡಾ.ಬಿ.ಆರ್.ಅಂಬೇಡ್ಕರ್ ಸಂಘದ ಅಧ್ಯಕ್ಷ ಎಸ್.ರುದ್ರಮುನಿ ಮಾತನಾಡಿ, ಅಂಬೇಡ್ಕರ್ ಅವರು ಕೇವಲ ಒಬ್ಬ ವ್ಯಕ್ತಿಯಲ್ಲ, ಅವರು ಒಂದು ಶಕ್ತಿ. ಶೋಷಿತರ ಧ್ವನಿಯಾಗಿ, ಜ್ಞಾನದ ಸಂಕೇತವಾಗಿ ಬೆಳೆದ ಅವರು ನೀಡಿದ ಕೊಡುಗೆಗಳು ಇಂದಿಗೂ ನಮ್ಮ ಪ್ರಜಾಪ್ರಭುತ್ವದ ಅಡಿಪಾಯವಾಗಿವೆ ಎಂದರು.

ಇಲ್ಲಿನ ಡಾ.ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನ್ ರಾಮ್ ಅವರ ಪುತ್ಥಳಿಗೆ ಹೂವಿನ ಹಾರಗಳನ್ನು ಹಾಕಿ ನಮಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ವಿಜಯಕುಮಾರ, ಹೊನ್ನೂರಪ್ಪ, ತಿಪ್ಪೇಸ್ವಾಮಿ, ಬಾಬು, ಮರಿಸ್ವಾಮಿ, ಯಲ್ಲಪ್ಪ, ಧನಂಜಯ, ರವಿ ಮಣ್ಣೂರು, ಪ್ರಕಾಶ, ಗ್ಯಾಸ್ ರಾಜ, ಮಾರೆಣ್ಣ, ಉಮೇಶ, ಮಂಜು, ರಾಜ, ಸುಂದರ, ಸುದೀಪ್, ಆನಂದ, ವಿದ್ಯ, ದುರುಗೇಶ, ಪುರುಷೋತ್ತಮ, ಕುಬೇರ, ರಾಘವೇಂದ್ರ ಇದ್ದರು.

# ಜು.08 ರಂದು ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

**▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಗೆ ಬರುವ110/11ಕೆವಿ ಸೌತ್ ವಿದ್ಯುತ್ ವಿತರಣ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಫೀಡರ್–25 ರಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಮತ್ತು ಫೀಡರ್–47 ರ ವ್ಯಾಪ್ತಿಯಲ್ಲಿ ರಸ್ತೆ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಜುಲೈ 08 ರಂದು ಬೆಳಿಗ್ಗೆ 10 ರಿಂದ ಸಂಜೆ 05 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಫೀಡರ್–47 ರ ವ್ಯಾಪ್ತಿಯ ಆಂಧ್ರಾಳ್ ರಸ್ತೆ, ಕೊಲ್ಮಿ ಚೌಕ್, ಮಿಲ್ಲರ ಪೇಟೆ ಮತ್ತು ಫೀಡರ್–25 ರ ವ್ಯಾಪ್ತಿಯ ಬಾಪೂಜಿ ನಗರ, ಬಾಪೂಜಿ ನಗರ ಸರ್ಕಲ್, ರಾಣಿತೋಟ, ಕಣೆಕಲ್ ಬಸ್ ಸ್ಟ್ಯಾಂಡ್, ದೊಡ್ಡ ಮಾರ್ಕೆಟ್, ಟೋಪಿಗಲ್ಲಿ, ಮರಿಸ್ವಾಮಿ ಮಠ, ಕಂಬಳಿ ಬಜಾರ್, ಅಲ್ಲಂ ಕಾಂಪೌಂಡ್, ನಾಗಪ್ಪ ಕಟ್ಟೆ, ಹೂವಿನ ಮಾರುಕಟ್ಟೆ ಸೇರಿದಂತೆ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಹಾಗೂ ವಿದ್ಯುತ್ ಗ್ರಾಹಕರು ಜೆಸ್ಕಾಂ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಯು.ನಿಸಾರ್ ಅಹಮದ್ ಅವರ ಜಿಲ್ಲಾ ಪ್ರವಾಸ

**■ ಗಣಿನಾಡವಾಣಿ ವಾರ್ತೆ, ದಾವಣಗೆರೆ**

ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗದ ಅಧ್ಯಕ್ಷರಾದ ಯು.ನಿಸಾರ್ ಅಹಮದ್ ಅವರು ಜುಲೈ 7 ಮತ್ತು 8 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ಜುಲೈ 7 ರಂದು ದಾವಣಗೆರೆ ಆಗಮಿಸಿ ವಾಸ್ತವ್ಯ ಹೂಡುವರು. ಜುಲೈ 8 ರಂದು ಬೆಳಿಗ್ಗೆ 10 ಗಂಟೆಗೆ ದಾವಣಗೆರೆಯ ಹಿಂದುಳಿದ, ಕೊಳಚೆ ಪ್ರದೇಶಗಳಲ್ಲಿರುವ ಅಂಗನವಾಡಿ ಮತ್ತು ಉರ್ದು ಶಾಲೆಗಳಿಗೆ ಭೇಟಿ ನೀಡುವರು. ಮಧ್ಯಾಹ್ನ 12.30 ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಅಲ್ಪ ಸಂಖ್ಯಾತರ ಕುಂದುಕೊರತೆ ವಿಚಾರಣೆ, ಮಧ್ಯಾಹ್ನ 3 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮಕ್ಕೆ ಸಂಬಂಧಿಸಿದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಸಂಜೆ 6 ಗಂಟೆಗೆ ಚಿತ್ರದುರ್ಗಕ್ಕೆ ತೆರಳುವರು.

## ಡಾ.ನಾಗಲಕ್ಷ್ಮಿ ಚೌದರಿ ಅವರ ಜಿಲ್ಲಾ ಪ್ರವಾಸ

**■ ಗಣಿನಾಡವಾಣಿ ವಾರ್ತೆ, ದಾವಣಗೆರೆ**

ಕರ್ನಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾಧ ಡಾ.ನಾಗಲಕ್ಷ್ಮಿ ಚೌದರಿ ಅವರು ಜುಲೈ–2026ರ ಮಾಹೆಯಲ್ಲಿ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಜುಲೈ 12 ರಂದು ಬೆಳಿಗ್ಗೆ 9.30ಕ್ಕೆ ದಾವಣಗೆರೆ ಆಗಮಿಸಿ ನಗರದ ಚಾಮರಾಜೇಂದ್ರ ವೃತ್ತದಲ್ಲಿರುವ ಮಹಿಳೆಯರ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ನೀಡುವರು. ಬೆ.10.30ಕ್ಕೆ ಎವಿಕೆ ಕಾಲೇಜು ರಸ್ತೆಯಲ್ಲಿರುವ ಗುರುಭವನದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಹಮ್ಮಿಕೊಂಡಿರುವ ಜಿಲ್ಲಾ ಮಟ್ಟದ 25–26ನೇ ಸಾಲಿನ ಎಸ್.ಎಸ್.ಎಲ್.ಸಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಜ್ಞಾನಕಾಶಿ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಉದ್ಘಾಟಿಸುವರು. ಸಂಜೆ 6 ಗಂಟೆಗೆ ದಾವಣಗೆರೆಯ ಹಳೇ ಕುಂದುವಾಡ ಗ್ರಾಮದಲ್ಲಿರುವ ಸಂಚಾರಿ ಕುರಿಗಾಹಿ ಮಹಿಳೆಯರೊಂದಿಗೆ ಸಂವಾದ ನಡೆಸುವರು ಹಾಗೂ ದಾವಣಗೆರೆಯಲ್ಲಿ ವಾಸ್ತವ್ಯ ಹೂಡುವರು. ಜುಲೈ 13 ರಂದು ಬೆಂಗಳೂರಿಗೆ ತೆರಳುವರೆಂದು ಪ್ರಕಟಣೆ ತಿಳಿಸಿದೆ.

## ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಯಶಸ್ವಿ



**■ ಗಣಿನಾಡವಾಣಿ ವಾರ್ತೆ, ದಾವಣಗೆರೆ**

ಭಾರತೀಯ ರೆಡ್ ಕ್ರಾಸ್ ಸೊಸೈಟಿ, ಜಿಲ್ಲಾ ಶಾಖೆಯ ವತಿಯಿಂದ ಮೈ ಭಾರತ ದಾವಣಗೆರೆ ಮತ್ತು ಕೊಕೊ ಪಾಮ್ಸ್ ಮಾಳಗೊಂಡನಹಳ್ಳಿ ಸಹಯೋಗದಲ್ಲಿ ಭಾನುವಾರ(ಜುಲೈ 5) ರಂದು ಆಯೋಜಿಸಲಾಗಿದ್ದ ಸ್ವಯಂಪ್ರೇರಿತ ರಕ್ತದಾನ ಶಿಬಿರವು ಅತ್ಯಂತ ಯಶಸ್ವಿಯಾಗಿ ನಡೆಸಲಾಯಿತು. ರಕ್ತದಾನದ ಮಹತ್ವವನ್ನು ತಿಳಿಸಿ ಯುವಜನರು ಹಾಗೂ ಸಾರ್ವಜನಿಕರು ನಿಯಮಿತವಾಗಿ ರಕ್ತದಾನ ಮಾಡುವಂತೆ ಕರೆ ನೀಡಿದರು. ಶಿಬಿರದಲ್ಲಿ ಒಟ್ಟು 20 ಜನ ಸಿಬ್ಬಂದಿಗಳು ಸ್ವಯಂಪ್ರೇರಿತ ರಕ್ತದಾನ ಮಾಡಿದ್ದು, ಸಂಗ್ರಹಿಸಲಾದ ರಕ್ತವು ತುರ್ತು ಚಿಕಿತ್ಸೆಯಲ್ಲಿರುವ ರೋಗಿಗಳು, ಅಪಘಾತಕ್ಕೊಳಗಾದವರು ಹಾಗೂ ಇತರ ಅಗತ್ಯವಿರುವವರಿಗೆ ಜೀವದಾನವಾಗಲಿದೆ. ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸದಸ್ಯರಾದ ಚರ್ಮನ್, ಆರ್ ಜಿ. ದತ್ತರಾಜ್ ವೈದ್ಯಕೀಯ ಸಿಬ್ಬಂದಿ, ಸ್ವಯಂಸೇವಕರು ಭಾಗವಹಿಸಿದ್ದರು.

## ಮನೆ ಮನೆಗೆ ಬಿಎಲ್‌ಒಗಳ ಭೇಟಿ ಜಿಲ್ಲೆಯಲ್ಲಿ ಶೇ.95.11 ರಷ್ಟು ಗಣತಿ ನಮೂನೆಗಳ ವಿತರಣೆ

**■ ಗಣಿನಾಡವಾಣಿ ವಾರ್ತೆ, ಹೊಸಪೇಟೆ**

ವಿಜಯನಗರ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಚುರುಕಿನಿಂದ ಸಾಗುತ್ತಿದ್ದು, ಜಿಲ್ಲೆಯಾದ್ಯಂತ ಈವರೆಗೆ ಒಟ್ಟು 10,86,898 ನಮೂನೆಗಳ ವಿತರಣೆ ಮಾಡುವ ಮೂಲಕ ಶೇ 95.11 ಪ್ರಗತಿ ಸಾಧಿಸಿದೆ.

ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಿಸುತ್ತಿದ್ದಾರೆ. ಪ್ರಸ್ತುತ ಜಿಲ್ಲೆಯ ಮತದಾರರ ಪಟ್ಟಿಯಲ್ಲಿ ಒಟ್ಟು 11,42,732 ಮತದಾರರಿದ್ದು. ಈಗಾಗಲೇ ಶೇ. 94 ರಷ್ಟು ಮತದಾರರ ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದೆ. ಜೂನ್ 30 ರಿಂದ ಅಭಿಯಾನ ಪ್ರಾರಂಭವಾಗಿದ್ದು, ಜುಲೈ 29 ರವರೆಗೆ ಮನೆ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವ ಹಾಗೂ ಡಿಜಿಟಲೀಕರಣ ಪ್ರಕ್ರಿಯೆ ನಡೆಯಲಿದೆ.ವಿತರಿಸಲಾದ ಗಣತಿ ನಮೂನೆಗಳ ಪೈಕಿ ಒಟ್ಟು 71,306 (ಶೇ 6.24) ನಮೂನೆಗಳನ್ನು ಈಗಾಗಲೇ ಡಿಜಿಟಲೀಕರಣಗೊಳಿಸಲಾಗಿದೆ. ಇದಲ್ಲದೆ, 806 ಮತದಾರರು ಸ್ವತಃ ಆನ್‌ಲೈನ್ ಮೂಲಕ ನಮೂನೆಗಳನ್ನು ಸಲ್ಲಿಸಿದ್ದಾರೆ. ಬಿಎಲ್‌ಒಗಳ ಪರಿಶೀಲನೆ ವೇಳೆ ಜಿಲ್ಲೆಯಲ್ಲಿ 668 ಮೃತ ಮತದಾರರು ಹಾಗೂ ಖಾಯಂ ಆಗಿ ಸ್ಥಳಾಂತರಗೊಂಡಿರುವ 343 ಮತದಾರರರನ್ನು ಗುರುತಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಮನವಿ ಮಾಡಿದ್ದಾರೆ.

## ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

**■ ಗಣಿನಾಡವಾಣಿ ವಾರ್ತೆ, ಬೆಂಗಳೂರು**

ಬೆಂಗಳೂರಿನ ಕೆ.ಆರ್. ವೃತ್ತದಲ್ಲಿರುವ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯವು (ಯುವಿಸಿಇ) 2026–27ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ವಿವಿಧ ವಿಭಾಗಗಳಲ್ಲಿ ಖಾಲಿ ಇರುವ ಅತಿಥಿ ಉಪನ್ಯಾಸಕರ ಹುದ್ದೆಗಳ ಭರ್ತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಬಿ.ಟೆಕ್, ಎಂ.ಟೆಕ್, ಬಿ.ಆರ್ಕ್ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ವಿಷಯಗಳನ್ನು ಬೋಧಿಸಲು Ph.D / M.Tech /PG ಪದವಿಯನ್ನು ಹೊಂದಿರುವ ಅಭ್ಯರ್ಥಿಗಳಿಂದ ಎಐಸಿಟಿಇ / ಯುಜಿಸಿ ನಿಯಮಗಳ ಪ್ರಕಾರ ಅತಿಥಿ ಉನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ www.uvce.karnataka.gov.in ನಿಂದ ನಿಗದಿತ ಅರ್ಜಿ ನಮೂನೆಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳ ಪ್ರತಿಗಳೊಂದಿಗೆ ಕುಲಸಚಿವರ ಕಚೇರಿ, ಯುವಿಸಿಇ, ಕೆ.ಆರ್. ವೃತ್ತ, ಬೆಂಗಳೂರು ಇಲ್ಲಿಗೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ಜುಲೈ 13 ಕೊನೆಯ ದಿನಾಂಕವಾಗಿದ್ದು, ನಿಗದಿತ ದಿನಾಂಕದ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಸಂದರ್ಶನದ ದಿನಾಂಕವನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಅಥವಾ ಅರ್ಹ ಅಭ್ಯರ್ಥಿಗಳಿಗೆ ನೇರವಾಗಿ ತಿಳಿಸಲಾಗುವುದು. ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಯುವಿಸಿಇ ಕುಲಸಚಿವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಜೋತು ಬಿದ್ದ ವಿದ್ಯುತ್ ತಂತಿಗಳು : ಸರಿಪಡಿಸದ ಜೆಸ್ಕಾಂ ಅಧಿಕಾರಿಗಳು : ಆತಂಕದಲ್ಲಿ ನಿವಾಸಿಗಳ ಬದುಕು

**■ ಗಣಿನಾಡವಾಣಿ ವಾರ್ತೆ, ಕಂಪ್ಲಿ**

ಪಟ್ಟಣದ ಎಂ.ಡಿ.ಕ್ಯಾಂಪಿನ 22ನೇ ವಾರ್ಡಿನ ಸ್ಲಂ ಬಡಾವಣೆ ಮನೆಗಳ ಮೇಲೆ ವಿದ್ಯುತ್ ತಂತಿ ಹಾದು ಹೋಗಿದೆ. ಇದರಿಂದ ಬಡಾವಣೆ ನಿವಾಸಿಗಳು ಆತಂಕದಲ್ಲಿ ಜೀವನ ಸಾಗಿಸಬೇಕಿದೆ ಎಂದು ಬಡಾವಣೆ ನಿವಾಸಿಗಳು ಆರೋಪಿಸಿದ್ದಾರೆ.

ಇಲ್ಲಿನ ಸ್ಲಂ ವಾರ್ಡಿನಲ್ಲಿರುವ ಮನೆಗಳಲ್ಲಿ ಕಳೆದ 20 ವರ್ಷಗಳಿಂದ ವಾಸಿಸುತ್ತಿದ್ದಾರೆ. 10 ಮನೆಗಳ ಮೇಲೆ ಹಾದು ಹೋಗಿರುವ ವಿದ್ಯುತ್ ತಂತಿಗಳು ಅಪಘಾತಕ್ಕೆ ಆಹ್ವಾನಿಸುತ್ತಿವೆ.

ಈ ಮನೆಗಳ ಮೇಲೆ ವಿದ್ಯುತ್ ತಂತಿ ಹಾದು ಹೋಗಿವೆ. ಇವುಗಳನ್ನು ಬದಲಿಸುವಂತೆ ದೂರು ನೀಡಿದ್ದರೂ ಇಲಾಖೆಯವರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ದೂರಿದ್ದಾರೆ.

ಇಲ್ಲಿ ಮನೆಗಳ ಮೇಲೆ ಹೋದರೆ ಕೈಗೆಟುಕುವಂತೆ ವಿದ್ಯುತ್ ತಂತಿಗಳಿವೆ. ಮಳೆ ಬಂದರೆ ಎಲ್ಲಿ ಮನೆ ಗೋಡೆಗಳಿಗೆ ವಿದ್ಯುತ್ ಪ್ರವಹಿಸಿ ಅನಾಹುತ ಸಂಭವಿಸುತ್ತದೆಯೊ ಎಂಬ ಭಯ ಇಲ್ಲಿನ ಜನರಲ್ಲಿದೆ. ಮನೆಗಳ ಮೇಲೆ ಹೋದರೆ ಸಾಕು ಅನಾಹುತ ಕಟ್ಟಿಟ್ಟ ಬುತ್ತಿ ಎಂಬಂತಿದೆ. ಇಲ್ಲಿನ ಜನರು ಕಡುಬಡವರಾಗಿದ್ದು, ಮನೆಯವರು ದಿನನಿತ್ಯದ ದುಡಿಮೆಗಾಗಿ ತೆರಳುವದುಂಟು. ಆದ್ದರಿಂದ ಮನೆಯವರು ಕೆಲಸಕ್ಕೆ ಹೋದಾಗ ಮಕ್ಕಳು ಮನೆ ಮೇಲೆ ಹೋದರೆ ಸಮಸ್ಯೆಯಾಗುತ್ತದೆ. ಇಲ್ಲಿನ ವಿದ್ಯುತ್ ತಂತಿಗಳು ಅಪಾಯಕ್ಕೆ ಆಹ್ವಾನಿಸುವಂತಿದೆ. ಇಲ್ಲಿ ಅಪಾಯದಲ್ಲಿ ನಿವಾಸಿಗಳ ಗೋಳು ಕೇಳುವವರು ಇಲ್ಲದಂತಾಗಿದೆ. ಮತ್ತು ಇಲ್ಲಿ



ನಿವಾಸಿ ಕಾರೇಕಲ್ ಅಂಜಿನಪ್ಪ ಅವರ ಮನೆ ಮೇಲೆ ಬಾಗಿರುವ ವಿದ್ಯುತ್ ತಂತಿಗಳಿಗೆ ಕಟ್ಟಿಗೆಗಳನ್ನು ಕಟ್ಟಿ ಪೋಟಿ ನೀಡಿದ್ದಾರೆ. ಆದರೆ, ಯಾವಾಗ ಅಪಾಯವಾಗುತ್ತದೋ ಎಂಬ ಆತಂಕ ಮನೆ ಮಾಡಿದೆ. ಇಲ್ಲಿನ ಕಂಬದೊಂದಿಗೆ ತಂತಿಗಳನ್ನು ಸ್ಥಳಾಂತರಿಸಬೇಕೆಂದು ಜೆಸ್ಕಾಂ ಅಧಿಕಾರಿಗಳಿಗೆ ಮನವಿ ಮಾಡಿದರೂ ಏನು ಪ್ರಯೋಜನೆ ಇಲ್ಲದಂತಾಗಿದೆ. ಅಧಿಕಾರಿಗಳು ತಂತಿ ಸ್ಥಳಾಂತರಿಸದೆ ಬೇಜವಾಬ್ದಾರಿ ಪ್ರದರ್ಶಿಸುತ್ತಿದ್ದಾರೆ ಎಂದು ಆರೋಪಿಸುವ ಜೊತೆಗೆ ಕೂಡಲೇ ಕಂಬದೊಂದಿಗೆ ವಿದ್ಯುತ್ ತಂತಿಗಳನ್ನು ಸ್ಥಳಾಂತರಿಸಬೇಕು ಎಂದು ಬಡಾವಣೆ ನಿವಾಸಿಗಳಾದ ಹಮಾಲಿ ಸಂಘದ ಗೌರವಾಧ್ಯಕ್ಷ ಬಾಲಪ್ಪ, ಜಂಡೆಕಟ್ಟೆ ಅಂಜಿನಪ್ಪ, ಕೆ. ಹೊನ್ನೂರಸ್ವಾಮಿ ಒತ್ತಾಯಿಸಿದ್ದಾರೆ.

**ಮನವಿ ಪತ್ರ ಸಲ್ಲಿಕೆ :** ಸ್ಥಳೀಯ ಎಂ.ಡಿ.ಕ್ಯಾಂಪಿನ ಮನೆಗಳ ಮೇಲೆ ಹಾದು ಹೋಗಿರುವ ಅಪಾಯದ ವಿದ್ಯುತ್‌ತಂತಿಗಳನ್ನುಬೇರೆಡೆಸ್ಥಳಾಂತರಿಸಬೇಕೆಂದು ಆಗ್ರಹಿಸಿ, ನಿವಾಸಿಗಳು ಪಟ್ಟಣದ ತಹಶೀಲ್ದಾರ್ ಕಛೇರಿಯಲ್ಲಿ ತಹಶೀಲ್ದಾರ್ ಜೂಗಲ್ ಮಂಜುನಾಯಕಗೆ ಮನವಿ ಪತ್ರ ಮಂಗಳವಾರ ಸಲ್ಲಿಸಿದರು.

ನಂತರ ಮುಖಂಡ ಕರಡಿ ವಲಿಸಾಬ್ ಮಾತಬಾಡಿ, ಇಲ್ಲಿನ ನಿವಾಸಿಗಳು ವಿದ್ಯುತ್ ಅಪಾಯದ ನಡುವೆ ಜೀವನ ಸಾಗಿಸುತ್ತಿದ್ದಾರೆ. ಇಲ್ಲಿನ ತಂತಿಗಳು ಮನೆ ಮೇಲೆ ಜೋತು ಬಿದ್ದಿವೆ. ಜೋರಾಗಿ ಮಳೆ ಬೀಸಿದಾಗ ತಂತಿಗಳು ಒಂದಾನೊಂದು ಸ್ಪರ್ಶಿಸಿ, ಬೆಂಕಿ ಬೀಳುತ್ತದೆ. ಇಲ್ಲಿನ ನಿವಾಸಿಗಳಲ್ಲಿ ಚಿಕ್ಕ ಚಿಕ್ಕ ಮಕ್ಕಳಿದ್ದಾರೆ. ಕೆಲ ಸಲ ಮಕ್ಕಳನ್ನು ನಿವಾಸಿಗಳು ಅಪಾಯದಿಂದ ಪಾರು ಮಾಡಿದ್ದಾರೆ.

ಈಗಾಗಲೇ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದರೂ, ಪ್ರಯೋಜನೆಯಾಗುತ್ತಿಲ್ಲ. ಸ್ಥಳಕ್ಕೆ ಜೆಸ್ಕಾಂ ಲೈನ್ ಮ್ಯಾನ್ ಮತ್ತು ಜೆಇ ಬಂದು ಪರಿಶೀಲಿಸಿದರೂ ಸಮಸ್ಯೆಗೆ ಮುಕ್ತಿ ಇಲ್ಲದಂತಾಗಿದೆ.

ಆದ್ದರಿಂದ ಮಾನ್ಯ ತಹಶೀಲ್ದಾರ್ಗೆ ಮನವಿ ಸಲ್ಲಿಸಲಾಯಿತು. ಈಗಾಲಾದರೂ ಸಮಸ್ಯೆಗೆ ಬಗೆಹರಿಸುತ್ತದೆ ಎಂಬ ವಿಶ್ವಾಸವಿದೆ. ಆದರೆ, ಇದೇ ತರ ಬೇಜವಾಬ್ದಾರಿ ತೋರಿದಲ್ಲಿ ಮುಂದಿನ ದಿನದಲ್ಲಿ ಜೆಸ್ಕಾಂ ಕಛೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಎಚ್ಚರಿಸಲಾಗುವುದು.

ಈ ಸಂದರ್ಭದಲ್ಲಿ ಹಮಾಲಿ ಸಂಘದ ಗೌರವಾಧ್ಯಕ್ಷ ಬಾಲಪ್ಪ, ಜಂಡೆಕಟ್ಟೆ ಅಂಜಿನಪ್ಪ, ಕೆ. ಹೊನ್ನೂರಸ್ವಾಮಿ, ಸಿ.ಬಸವರಾಜ ಸೇರಿದಂತೆ ನಿವಾಸಿಗಳಿದ್ದರು.

**ಸ್ಥಳ ಪರಿಶೀಲನೆ :** ಇಲ್ಲಿನ ಎಂ.ಡಿ.ಕ್ಯಾಂಪಿನ ಸ್ಲಂ ವಾರ್ಡಿನ ಮನೆಗಳ ಮೇಲೆ ಜೋತು ಬಿದ್ದ ಸ್ಥಳಕ್ಕೆ ತಹಶೀಲ್ದಾರ್ ಜೂಗಲ್ ಮಂಜುನಾಯಕ ಭೇಟಿ ನೀಡಿ, ಪರಿಶೀಲಿಸಿ, ಸೂಕ್ತಕ್ರಮಕ್ಕೆ ಜೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು.

## ಬಣಜಿಗರು ಒಗ್ಗಟ್ಟಾಗಿ ಶಕ್ತಿ ಪ್ರದರ್ಶನ ಮಾಡುವ ಅಗತ್ಯವಿದೆ : ಮರಿರಾಜುಗೌಡ



**■ ಗಣಿನಾಡವಾಣಿ ವಾರ್ತೆ, ಕುರುಗೋಡು**

ಒಳಜಗಳ ಮರೆತು ಒಗ್ಗಟ್ಟು ಪ್ರದರ್ಶಿಸಿದರೆ ಮಾತ್ರ ಬಣಜಿಗ ಸಮಾಜ ರಾಜಕೀಯ, ಸಾಮಾಜಿಕ ಮತ್ತು ಆರ್ಥಿಕವಾಗಿ ಗುರುತಿಸಿಕೊಳ್ಳಲು ಸಾಧ್ಯ ಎಂದು ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಎಂ.ಡಿ.ಮರಿರಾಜುಗೌಡ ಅಭಿಪ್ರಾಯಪಟ್ಟರು.

ಪಟ್ಟಣದಲ್ಲಿ ಭಾನುವಾರ ಎಂ.ಡಿ.ಎಂ ಶಾಲಾ ಅವರಣದಲ್ಲಿ

ಆಯೋಜಿಸಿದ್ದ ಕರ್ನಾಟಕ ರಾಜ್ಯ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ತಾಲ್ಲೂಕು ಸಮಾವೇಶದಲ್ಲಿ ಅವರು ಮಾತನಾಡಿದರು.

ಬಸವತತ್ವ ಮತ್ತು ಲಿಂಗಾಯತ ಧರ್ಮದ ಮೌಲ್ಯಗಳನ್ನು ಮೈಗೂಡಿಸಿಕೊಂಡಿರುವ ಬಣಜಿಗ ಸಮಾಜ ನಾಡಿನಲ್ಲಿ ಶ್ರೀಮಂತ ಪರಂಪರೆಯನ್ನು ಹೊಂದಿದೆ. ಸಮಾಜದ ಧ್ಯೇಯಗಳನ್ನು ಉಳಿಸಿ ಬೆಳೆಸಲು ಸಮಾಜದ ಯುವಕರು ಮುಂದಾಗಬೇಕು ಎಂದರು.

ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಉಪಾಧ್ಯಕ್ಷ ಶಿವಾನಂದಪ್ಪ ದಂಡಿನ್ ಮಾತನಾಡಿ, ವ್ಯಾಪಾರ ವಹಿವಾಟು ನಡೆಸುತ್ತ ಸಮಾಜದ ಎಲ್ಲ ವರ್ಗದವರೊಂದಿಗೆ ಸೌಹಾರ್ದಯುತವಾಗಿ ಜೀವಿಸುವ ಬಣಜಿಗ ಸಮಾಜವನ್ನು ಸಾಮಾನ್ಯ ವರ್ಗಕ್ಕೆ ಸೇರಿಸಿದ್ದಾರೆ. ಇದರಿಂದ ಮಕ್ಕಳ ಉನ್ನತ ಮತ್ತು ತಾಂತ್ರಿಕ ಶಿಕ್ಷಣ ಮತ್ತು ಸರ್ಕಾರಿ ಉದ್ಯೋಗ ಪಡೆಯುವಲ್ಲಿ ಹಿನ್ನಡೆಯಾಗುತ್ತಿದೆ. ಪ್ರವರ್ಗ2ಎ ನೀಡುವಂತೆ ಒತ್ತಾಯಿಸಲು ಎಲ್ಲರೂ ಒಗ್ಗಟ್ಟಾಗಿ ಹೋರಾಟ ರೂಪಿಸುವ ಅಗತ್ಯವಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕದ ಅಧ್ಯಕ್ಷ ನಿಷ್ಠಿರುದ್ರಪ್ಪ ಮಾತನಾಡಿದರು. 2ನೇ ಶತಮಾನದಲ್ಲಿನ ಬಸವಣ್ಣನವರ ತತ್ವದಿಂದ ಪ್ರೇರಿತರಾದ ಬಣಜಿಗರು ಲಿಂಗವಂತರಾಗಿ ಬದಲಾಗಿದ್ದೇವೆ ಎಂದು

ವ್ಯಾಪಾರ ವೃತ್ತಿಯಲ್ಲಿ ಗುರುತಿಸಿಕೊಂಡಿರುವ ಬಣಜಿಗರು. ಅನ್ಯ ಜಾತಿ ಯವರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ ಎಂದರು.

ಪ್ರವರ್ಗ 2ಎ ಸೇರಲು ಎಲ್ಲರೂ ಸೇರಿಕೊಂಡು ಹೋರಾಟ ನಡೆಸಬೇಕು ಎಂದು ಮನವಿ ಮಾಡಿದರು

ಎನ್.ವೀರೇಂದ್ರ ಗೌಡ ಕಾರ್ಯಕ್ರಮ ಕುರಿತು ಪ್ರಸ್ತಾವಿಕ ಮಾತನಾಡಿದರು. ತಾಲ್ಲೂಕು ಬಣಜಿಗ ಸಮಾಜದ ನೂತನ ತಾಲೂಕು ಅಧ್ಯಕ್ಷರು ಹೂತ್ತೂರು ಹೇಮಾದ್ರಿ ಸಂಘದ ಸಭೆಯಲ್ಲಿ ಆಯ್ಕೆ ಮಾಡಲಾಯಿತು ಎನ್. ಮರೇಗೌಡ, ಜೆ. ಸೋಮಶೇಖರ ಗೌಡ, ಎಚ್. ವಾಗೀಶ್, ಅಂಗಡಿ ಶಂಕ್ರಪ್ಪ, ಎಚ್.ಹೇಮಾದ್ರಿ, ಕೋರಿ ವಿರೂಪಾಕ್ಷಪ್ಪ, ರಾಜಣ್ಣ, ಗುತ್ತಿಗನೂರು ಚಂದ್ರೇಗೌಡ, ಗಂಗಾವತಿ ವೀರೇಶ್ ಮತ್ತು ಶಾಪುರ ದೊಡ್ಡ ರಂಗಪ್ಪ, ಜಗದೀಶ್,ಶಿಕ್ಷಕ.ಗವಿಯಪ್ಪ,ಇದ್ದರು.

## ತಾಲ್ಲೂಕು ಪತ್ರಿಕಾ ಭವನಕ್ಕಾಗಿ ಮನವಿ



**■ ಗಣಿನಾಡವಾಣಿ ವಾರ್ತೆ, ಸಿರುಗುಪ್ಪ**

ನಗರದ ತಹಶೀಲ್ದಾರ್ ಕಚೇರಿಯಲ್ಲಿ ತಾಲ್ಲೂಕು ಪತ್ರಕರ್ತರ ಸಂಘದ ಕಾರ್ಯಾಲಯಕ್ಕಾಗಿ ಸರ್ಕಾರಿ ಜಾಗದ ಪತ್ರಿಕಾ ಭವನ ಮಂಜೂರಾತಿ ನೀಡುವಂತೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲ್ಲೂಕು ಘಟಕದ ಸದಸ್ಯರು ಸೋಮವಾರ ತಹಶೀಲ್ದಾರ್ ಗೌಸಿಯ ಬೇಗಂ ಅವರಿಗೆ ಮನವಿ ಸಲ್ಲಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲ್ಲೂಕು ಅಧ್ಯಕ್ಷ ಡಿ.ಮಾರೆಪ್ಪ ನಾಯಕ ಮಾತನಾಡಿ, ಸಿರುಗುಪ್ಪ

ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಪತ್ರಿಕೆ ಹಾಗೂ ದೃಶ್ಯ ಮಾಧ್ಯಮಗಳ ಪತ್ರಕರ್ತರು ಸಾರ್ವಜನಿಕರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವಲ್ಲಿ ಮತ್ತು ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವಲ್ಲಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ.

ಆದರೆ, ಪ್ರಸ್ತುತ ನಮ್ಮ ತಾಲ್ಲೂಕಿನ ಪತ್ರಕರ್ತರಿಗೆ ಸುಸಜ್ಜಿತವಾದ ಒಂದು ಸ್ವಂತ ಕಾರ್ಯಾಲಯ ಇರುವುದಿಲ್ಲ. ಇದರಿಂದಾಗಿ ಪತ್ರಕರ್ತರು ಒಟ್ಟಿಗೆ ಕುಳಿತು ವರದಿಗಳನ್ನು ಸಿದ್ಧಪಡಿಸಲು, ಪತ್ರಿಕಾಗೋಷ್ಠಿಗಳನ್ನು ನಡೆಸಲು ಹಾಗೂ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಲು ತೀವ್ರ ತೊಂದರೆಯಾಗುತ್ತಿದೆ.

ತಾಲ್ಲೂಕು ಕೇಂದ್ರದಲ್ಲಿ ಪತ್ರಕರ್ತರಿಗಾಗಿ ಒಂದು ಪ್ರತ್ಯೇಕ ಕಾರ್ಯಾಲಯವಿದ್ದರೆ, ಅದು ಮಾಧ್ಯಮದ ಕೆಲಸಗಳಿಗೆ ಮಾತ್ರವಲ್ಲದೆ ತಾಲ್ಲೂಕಿನ ಪ್ರಗತಿಯ ಕುರಿತು ಚರ್ಚಿಸಲು ಮತ್ತು ಜನೋಪಯೋಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅನುಕೂಲವಾಗುತ್ತದೆ.

ತಾಲ್ಲೂಕು ಕೇಂದ್ರದ ಸೂಕ್ತ ಸ್ಥಳದಲ್ಲಿ ಪತ್ರಕರ್ತರ ಕಾರ್ಯಾಲಯದ ನಿರ್ಮಾಣಕ್ಕಾಗಿ ಸರ್ಕಾರಿ ಜಾಗವನ್ನು ಗುರುತಿಸಿ ಮಂಜೂರು ಮಾಡಿಕೊಡಬೇಕು.

ಅಥವಾ ಸದ್ಯಕ್ಕೆ ಲಭ್ಯವಿರುವ ಯಾವುದಾದರೂ ಸರ್ಕಾರಿ ಕಟ್ಟಡದಲ್ಲಿ ಕಾರ್ಯಾಲಯ ನಡೆಸಲು ತಾತ್ಕಾಲಿಕವಾಗಿ ಕೊಠಡಿಯೊಂದನ್ನು ವ್ಯವಸ್ಥೆ ಮಾಡಿಕೊಡಬೇಕು.

ಆದ್ದರಿಂದ, ಮಾನ್ಯ ತಹಶೀಲ್ದಾರರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಪತ್ರಕರ್ತರ ಹಿತದೃಷ್ಟಿಯಿಂದ ಹಾಗೂ ಸಾರ್ವಜನಿಕ ಕಾರ್ಯಗಳ ಸುಗಮ ನಿರ್ವಹಣೆಗಾಗಿ ಕಾರ್ಯಾಲಯಕ್ಕೆ ಸರ್ಕಾರಿ ಜಾಗದ ಪತ್ರಿಕಾ ಭವನ ಮಂಜೂರಾತಿ ನೀಡುವಂತೆ ಕೇಳಿದರು.

ಹಿರಿಯ ಪತ್ರಕರ್ತರಾದ ಅಅರ್.ಬಸವರೆಡ್ಡಿ, ಪಂಪಾಪತಿ ಓತೂರು, ಪ್ರಸಾದ್, ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಬಿ.ರಮೇಶ ಉಪ್ಪಾರ್, ಉಪಾಧ್ಯಕ್ಷ ಸೋಮ, ಪ್ರಧಾನ ಕಾರ್ಯದರ್ಶಿ ಜಾಲಿಹಾಳ್ ರಾಜಸಾಬ್, ಖಜಾಂಚಿ ನಾಗಪ್ಪ ಹಳೆಕೋಟೆ, ಸದಸ್ಯರಾದ ಎಚ್.ಮಲ್ಲಿಕಾರ್ಜುನ, ಅಂಗಡಿ ಗಾದಿಲಿಂಗ, ಸಾಯಿಬಾಬಾ ಇದ್ದರು.

## ಬಡ ಪ್ರತಿಭಾವಂತ ಇಂಜಿನಿಯರಿಂಗ್ ವಿದ್ಯಾರ್ಥಿನಿಗೆ ಲ್ಯಾಪ್‌ಟಾಪ್ ವಿತರಿಸಿದ ಅರವಿಂದ ಗೌಡ ಪಾಟೀಲ್

**■ ಗಣಿನಾಡವಾಣಿ ವಾರ್ತೆ, ಯಲಬುರ್ಗಾ**

ಯಲಬುರ್ಗಾ ತಾಲೂಕಿನ ಕುಡುಗುಂಟಿ ಗ್ರಾಮದ ಬಡ ಪ್ರತಿಭಾವಂತ ಇಂಜಿನಿಯರಿಂಗ್ ವಿದ್ಯಾರ್ಥಿನಿಗೆ ಲ್ಯಾಪ್‌ಟಾಪ್ ವಿತರಿಸಿ ಮಾನವೀಯತೆ ಮೆರೆದ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರು ಹಾಗೂ ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ಶ್ರೀ ಅರವಿಂದ ಗೌಡ ಪಾಟೀಲ್ ಅವರು

ಯಲಬುರ್ಗಾ ತಾಲೂಕಿನ ಕುಡುಗುಂಟಿ ಗ್ರಾಮದ ಬಡ ಪ್ರತಿಭಾವಂತ ಇಂಜಿನಿಯರಿಂಗ್ ವಿದ್ಯಾರ್ಥಿನಿ ಕುಮಾರಿ ಬೇಗಂ (ತಂದೆ: ಕಾಸಿಂಸಾಬ್ ಪಿಂಜಾರ್) ಅವರಿಗೆ ಲ್ಯಾಪ್‌ಟಾಪ್ ವಿತರಿಸುವ ಮೂಲಕ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರು ಹಾಗೂ ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ಶ್ರೀ ಅರವಿಂದ ಗೌಡ ಪಾಟೀಲ್ ಅವರು ತಮ್ಮ ಶಿಕ್ಷಣಪ್ರೇಮಿ ಹಾಗೂ ಸಮಾಜಮುಖಿ ಸೇವಾ ಮನೋಭಾವವನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ.

ಪ್ರತಿಯೊಂದು ಹಳ್ಳಿಯಲ್ಲಿರುವ



ಪ್ರತಿಭಾವಂತ ವಿದ್ಯಾರ್ಥಿ–ವಿದ್ಯಾರ್ಥಿನಿಯರನ್ನು ಗುರುತಿಸಿ, ಅವರ ಶೈಕ್ಷಣಿಕ ಪ್ರಗತಿಗೆ ಅಗತ್ಯವಾದ ಆರ್ಥಿಕ ನೆರವು, ಶೈಕ್ಷಣಿಕ ಸೌಲಭ್ಯಗಳು ಹಾಗೂ ನಿರಂತರ ಪ್ರೋತ್ಸಾಹವನ್ನು ನೀಡುತ್ತಾ ಶ್ರೀ ಅರವಿಂದ ಗೌಡ ಪಾಟೀಲ್ ಅವರು ಶಿಕ್ಷಣ ಕ್ಷೇತ್ರದಲ್ಲಿ ಮಾದರಿಯ ಸೇವೆ ಸಲ್ಲಿಸುತ್ತಿದ್ದಾರೆ.

"ಶಿಕ್ಷಣವೇ ಸಮಾಜದ ಅಭಿವೃದ್ಧಿಯ ಭದ್ರ ಬುನಾದಿ" ಎಂಬ ದೃಢ ನಂಬಿಕೆಯೊಂದಿಗೆ, ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಅಗತ್ಯ ನೆರವು ಒದಗಿಸುವ ಮೂಲಕ ಅವರ ಉನ್ನತ ಶಿಕ್ಷಣದ ಕನಸುಗಳಿಗೆ ಹೊಸ ಚೈತನ್ಯ ತುಂಬುತ್ತಿದ್ದಾರೆ. ಕುಡುಗುಂಟಿ ಗ್ರಾಮದ ಪ್ರತಿಭಾವಂತ ವಿದ್ಯಾರ್ಥಿನಿಗೆ ಲ್ಯಾಪ್‌ಟಾಪ್ ವಿತರಿಸಿದರು.

## ಜುಲೈ 10 ರಂದು ಭಾರತ್ ಸೌಟ್ಸ್ ಮತ್ತು ಗೈಡ್ಸ್ "ರಾಜ್ಯ ಪುರಸ್ಕಾರ ಪ್ರಶಸ್ತಿ ಪತ್ರ ಪ್ರದಾನ ಸಮಾರಂಭ"

**■ ಗಣಿನಾಡವಾಣಿ ವಾರ್ತೆ, ಬೆಂಗಳೂರು**

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರಾಜ್ಯ ಕೇಂದ್ರ ಕಾರ್ಯಾಲಯದ ವತಿಯಿಂದ ಕಬ್ಸ್, ಬುಲ್‌ಬುಲ್ಸ್, ಸ್ಕೌಟ್ಸ್, ಗೈಡ್ಸ್, ರೋವರ್ಸ್ ಮತ್ತು ರೇಂಜರ್ಸ್ ತಂಡಗಳಿಗೆ ಪ್ರತಿಷ್ಠಿತ ಚತುರ್ಥ ಚರಣ್, ಹೀರಕ್ ಪಂಖ್ ಹಾಗೂ ರಾಜ್ಯ ಪುರಸ್ಕಾರ ಪ್ರಶಸ್ತಿ ಪ್ರಮಾಣ ಪತ್ರ ಪ್ರದಾನ ಸಮಾರಂಭವನ್ನು ಜುಲೈ 10 ರಂದು ಸಂಜೆ 4.00 ಗಂಟೆಗೆ ಬೆಂಗಳೂರಿನ ಲೋಕಭವನದ ಗಾಜಿನ ಮನೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಭವ್ಯ ಸಮಾರಂಭದಲ್ಲಿ ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರು ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಪೋಷಕರಾದ ಥಾವರ್‌ಚಂದ್ ಗೆಹ್ಲೋಟ್ ಅವರು ಪಾಲ್ಗೊಂಡು ಪ್ರಶಸ್ತಿ ಪತ್ರಗಳನ್ನು ಪ್ರದಾನ ಮಾಡಲಿದ್ದಾರೆ. ಮುಖ್ಯಮಂತ್ರಿಗಳು ಹಾಗೂ ಸಂಸ್ಥೆಯ ಅಧ್ಯಕ್ಷರಾದ ಡಿ.ಕೆ. ಶಿವಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರು ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಅಪರ ರಾಜ್ಯ ಮುಖ್ಯ ಆಯುಕ್ತರಾದ ಯು.ಟಿ. ಖಾದರ್, ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರಾದ ವಿಕಾಸ್ ಕಿಶೋರ್ ಸುರಳ್ಕರ್, ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಉಪಾಧ್ಯಕ್ಷರಾದ ಕೊಂಡಜ್ಜಿ ಬ. ಷಣ್ಮುಖಪ್ಪ, ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಉಪಾಧ್ಯಕ್ಷರು ಮತ್ತು ಪರಿಸರ ನಿರ್ವಹಣೆ ಮತ್ತು ನೀತಿ ಸಮಶೋಧನಾ ಸಂಸ್ಥೆಯ ಅಧ್ಯಕ್ಷರಾದ ಎ.ಎನ್. ಮಹೇಶ್, ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಮುಖ್ಯ ಆಯುಕ್ತರಾದ ಡಾ. ಪಿ.ಜಿ.ಆರ್. ಸಿಂಧ್ಯ ಅವರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

## ಮೊಹರಂ ದುರಂತ : ಮೃತ ಯುವಕನ ಮನೆಗೆ ಮಾಜಿ ಶಾಸಕ ಟಿ.ಎಚ್. ಸುರೇಶ್ ಬಾಬು ಭೇಟಿ, ಕುಟುಂಬಕ್ಕೆ ಸಾಂತ್ವನ



**▪ ಗಣಿನಾಡವಾಣಿ ವಾರ್ತೆ, ಕುರುಗೋಡು**

ತಾಲೂಕಿನ ಕ್ಯಾದಿಗೆಹಾಳು ಗ್ರಾಮದಲ್ಲಿ ಇತ್ತೀಚೆಗೆ ಮೊಹರಂ ಹಬ್ಬದ ಸಂದರ್ಭದಲ್ಲಿ ಅಲಾಯಿ ಕುಣಿತದ ವೇಳೆ ಬೆಂಕಿಗೆ ಬಿದ್ದು ಮೃತಪಟ್ಟಿದ್ದ ಯುವಕ ಅಗಸರ ದೇವರಾಜ್ ಅವರ ನಿವಾಸಕ್ಕೆ ಮಾಜಿ ಶಾಸಕ ಟಿ. ಎಚ್. ಸುರೇಶ್ ಬಾಬು ಭೇಟಿ ನೀಡಿ, ಮೃತರ ಕುಟುಂಬದವರಿಗೆ ಸಾಂತ್ವನ ಹೇಳಿದರು.

ಕುಟುಂಬದ ಆಧಾರಸ್ತಂಭವಾಗಿದ್ದ ಮಗನನ್ನು ಕಳೆದುಕೊಂಡಿರುವ ತಂದೆ ಅಗಸರ ಹುಸೇನಿ ಹಾಗೂ ತಾಯಿ ದ್ಯಾವಮ್ಮ ತಮ್ಮ ದುಃಖ ಮತ್ತು ಸಂಕಷ್ಟವನ್ನು ಮಾಜಿ ಶಾಸಕರ ಮುಂದೆ ಹಂಚಿಕೊಂಡರು. ಅವರ ನೋವನ್ನು ಆಲಿಸಿದ ಸುರೇಶ್ ಬಾಬು ಕುಟುಂಬದ ಸದಸ್ಯರಿಗೆ ಧೈರ್ಯ ತುಂಬಿ, ದುಃಖವನ್ನು ಭರಿಸುವ ಶಕ್ತಿ ಸಿಗಲಿ ಎಂದು ಸಾಂತ್ವನ ಹೇಳಿದರು.

ಈ ಸಂದರ್ಭದಲ್ಲಿ ಅವರು ಮೃತರ ಕುಟುಂಬಕ್ಕೆ ವೈಯಕ್ತಿಕ ಧನಸಹಾಯ ನೀಡಿದ್ದು, ಮುಂದಿನ ದಿನಗಳಲ್ಲಿ ಸರ್ಕಾರದಿಂದ ಸೂಕ್ತ ಪರಿಹಾರ ದೊರಕಿಸಲು ಅಗತ್ಯ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಈ ವೇಳೆ ಕಂಪ್ಲಿ ತಾಲೂಕು ಬಿಜೆಪಿ ಎಸ್ಸಿ ಮೋರ್ಚಾ ಅಧ್ಯಕ್ಷ ಸಿ.ಎ. ಚೆನ್ನಪ್ಪ, ಕ್ಯಾದಿಗೆಹಾಳು ಗ್ರಾಮದ ಬಸವರಾಜ್ ಸ್ವಾಮಿ, ಶಶಿಕುಮಾರ್ ಹಾಗೂ ಬಿಜೆಪಿ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

## 'ವಿಬಿ-ಜಿ ರಾಮ್ ಜಿ' ಯೋಜನೆ : ವರ್ಷಕ್ಕೆ 125 ದಿನ ಉದ್ಯೋಗ, ದಿನಕ್ಕೆ 382 ರೂ. ಕೂಲಿ

**▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಕೇಂದ್ರ ಸರ್ಕಾರವು ಎರಡು ದಶಕಗಳಿಂದ ಜಾರಿಯಲ್ಲಿದ್ದ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ (ನರೇಗಾ) ಯೋಜನೆಯ ಬದಲಿಗೆ ಹೊಸದಾಗಿ 'ವಿಕಸಿತ ಭಾರತ – ಗ್ಯಾರಂಟಿ ಫಾರ್ ರೋಜಗಾರ್ ಅಜೀವಿಕ ಮಿಷನ್' (ವಿಬಿ–ಜಿ ರಾಮ್–ಜಿ) ಕಾಯ್ದೆಯನ್ನು ಜುಲೈ 1 ರಿಂದ ಜಾರಿಗೆ ತಂದಿದ್ದು, ಈ ಹೊಸ ಯೋಜನೆಯು ಗ್ರಾಮೀಣ ಜನರಿಗೆ ಹಿಂದಿನ ಯೋಜನೆಗಿಂತ ಹೆಚ್ಚು ದಿನಗಳ ಕೆಲಸ ಮತ್ತು ಹೆಚ್ಚಿನ ವೇತನವನ್ನು ಒದಗಿಸಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ತಿಳಿಸಿದ್ದಾರೆ.

ಹಳೆಯ ನರೇಗಾ ಯೋಜನೆಯಡಿ ವರ್ಷಕ್ಕೆ 100 ದಿನಗಳ ಉದ್ಯೋಗ ನೀಡಲಾಗುತ್ತಿತ್ತು. ಆದರೆ ಹೊಸ 'ವಿಬಿ–ಜಿ ರಾಮ್ ಜಿ' ಕಾಯ್ದೆಯಡಿ ಪ್ರತಿ ಗ್ರಾಮೀಣ ಕುಟುಂಬಕ್ಕೆ ವರ್ಷದಲ್ಲಿ 125 ದಿನಗಳ ಕಡ್ಡಾಯ ಉದ್ಯೋಗಾವಕಾಶ ಕಲ್ಪಿಸಲಾಗುವುದು.

ಇನ್ಮುಂದೆ ಗ್ರಾಮೀಣ ಭಾಗದ ಕೌಶಲ್ಯರಹಿತ ಕಾರ್ಮಿಕರಿಗೆ ಒಂದು ಮಾನವ ದಿನಕ್ಕೆ ರೂ. 382 ಕೂಲಿ ಮೊತ್ತವನ್ನು ನಿಗದಿಪಡಿಸಲಾಗಿದೆ. ಕಾರ್ಮಿಕರ ಸಮರ್ಪಕ ಲಭ್ಯತೆಯನ್ನು ಸುಗಮಗೊಳಿಸುವ ನಿಟ್ಟಿನಲ್ಲಿ ಯೋಜನೆಯಡಿ 60 ದಿನಗಳ ಕಾಲ ವಿರಾಮ ನೀಡುವ ವಿಶೇಷ ವ್ಯವಸ್ಥೆಯನ್ನು ಮಾಡಲಾಗಿದೆ.

ಗ್ರಾಮೀಣ ಭಾಗದಲ್ಲಿ ದೀರ್ಘಾವಧಿಯ ಮೂಲಸೌಕರ್ಯಕ್ಕೆ ಸಂಬಂಧಿಸಿದ ಉದ್ಯೋಗ ಸೃಷ್ಟಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಉತ್ಪಾದಕತೆ ಹೆಚ್ಚಿಸುವ ಸ್ವತ್ತುಗಳ ನಿರ್ಮಾಣ, ಹಲವಾರು ಸರ್ಕಾರಿ ಯೋಜನೆಗಳನ್ನು ಒಗ್ಗೂಡಿಸುವುದು ಹಾಗೂ ಉತ್ತಮ ಯೋಜನೆ ಮತ್ತು ನಿರ್ವಹಣೆಗೆ ಈ ಹೊಸ ಕಾಯ್ದೆಯಲ್ಲಿ ಹೆಚ್ಚು ಒತ್ತು ನೀಡಲಾಗಿದೆ.

ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅನುಷ್ಠಾನ ಇಲಾಖೆ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಗಳು ಗ್ರಾಮೀಣ ಜನರಿಗೆ ವೈಯಕ್ತಿಕ ಕಾಮಗಾರಿಗಳಾದ ದನದ ಕೊಟ್ಟಿಗೆ, ಕುರಿ/ಮೇಕೆ ಶೆಡ್, ಸೋಕ್ ಪಿಟ್, ಬದು ನಿರ್ಮಾಣ, ಕೃಷಿ ಹೊಂಡ ಹಾಗೂ ಪೌಷ್ಠಿಕ ತೋಟ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಜನರಿಗೆ ಉದ್ಯೋಗ ಕಲ್ಪಿಸುವುದರ ಜೊತೆಗೆ ದೀರ್ಘಾವಧಿಯ ಆಸ್ತಿ ಸೃಜನೆಯಂತಹ ಮೂಲಸೌಕರ್ಯ ಅಭಿವೃದ್ಧಿ ಕೆಲಸಗಳನ್ನು ಪರಿಣಾಮಕಾರಿಯಾಗಿ ಕೈಗೆತ್ತಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ತಿಳಿಸಿದ್ದಾರೆ.

ಜಿಲ್ಲಾದ್ಯಂತ ಈ ವಿಬಿ–ಜಿ ರಾಮ್–ಜಿ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಸೂಕ್ತ ರೂಪುರೇಷೆಗಳನ್ನು ಸಿದ್ಧಪಡಿಸಿಕೊಳ್ಳಲಾಗುತ್ತಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೋಟಗಾರಿಕೆ ಬೆಳೆ ವಿಮೆಯನ್ನು ನೋಂದಾಯಿಸಿಕೊಳ್ಳಿ

**▪ ಗಣಿನಾಡವಾಣಿ ವಾರ್ತೆ, ಸಿರುಗುಪ್ಪ**

2026–27 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯ ಹಸಿ ಮೆಣಸಿನಕಾಯಿ ಮತ್ತು ದಾಳಿಂಬೆ ಬೆಳೆ ಬೆಳೆದಿರುವ ರೈತರು ಅವಶ್ಯ ದಾಖಲಾತಿಗಳು ನಿಗದಿತ ಅರ್ಜಿಯೊಂದಿಗೆ ಪ್ರಸಕ್ತ ಸಾಲಿನ ಪಹಣಿ/ಕಂದಾಯ ರಸೀದಿ/ಖಾತೆ ಪುಸ್ತಕ/ಬ್ಯಾಂಕ್ ಖಾತೆಯ ಪುಸ್ತಕ, ಆಧಾರ್ ಕಾರ್ಡ್ ಮತ್ತು ಸ್ವಯಂ ಘೋಷಿತ ಬೆಳೆ ವಿವರಗಳೊಂದಿಗೆ ಬ್ಯಾಂಕ್, ಸಾರ್ವಜನಿಕ ಸೇವಾ ಕೇಂದ್ರಗಳಲ್ಲಿ (ಕಾಮನ್ ಸರ್ವಿಸ್ ಸೆಂಟರ್) ಹಾಗೂ ಗ್ರಾಮ ಓನ್ ಕೇಂದ್ರಗಳಲ್ಲಿ ನೋಂದಾಯಿಸಿ ಕೊಳ್ಳಬಹುದಾಗಿರುತ್ತದೆ.

ಹಸಿ ಮೆಣಸಿನಕಾಯಿ ವಿಮಾ ಮೊತ್ತ ಪ್ರತಿ ಹೆಕ್ಟೇರ್‌ಗೆ 71000 ನೀಡಲಾಗುವುದು. ರೈತರು ಪ್ರತಿ ಹೆಕ್ಟೇರ್‌ಗೆ ಪ್ರೀಮಿಯಂ ಮೊತ್ತ 3550 ಪಾವತಿಸಬೇಕಾಗಿರುತ್ತದೆ. ಮತ್ತು ದಾಳಿಂಬೆ ವಿಮಾ ಮೊತ್ತ ಪ್ರತಿ ಹೆಕ್ಟೇರ್‌ಗೆ 127000 ನೀಡಲಾಗುವುದು. ರೈತರು ಪ್ರತಿ ಹೆಕ್ಟೇರ್‌ಗೆ ಪ್ರೀಮಿಯಂ ಮೊತ್ತ 6350 ಪಾವತಿಸಲು ಜು.30 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಮತ್ತು ಸಿರುಗುಪ್ಪ

ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಯ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಂಪಿ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಶೇಷ ಆದ್ಯತೆ : ಕೆ.ಜೆ.ಜಾರ್ಜ್

**▪ ಗಣಿನಾಡವಾಣಿ ವಾರ್ತೆ, ವಿಜಯನಗರ**

ವಿಶ್ವವಿಖ್ಯಾತ ಪ್ರವಾಸಿ ತಾಣವಾದ ಹಂಪಿಯ ಸಮಗ್ರ ಅಭಿವೃದ್ಧಿ ಹಾಗೂ ಪ್ರವಾಸಿಗರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ನಗರಾಭಿವೃದ್ಧಿ ಇಲಾಖೆ, ಹಂಪಿ ಅಭಿವೃದ್ಧಿ ಪ್ರಾಧಿಕಾರ, ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆ ಹಾಗೂ ರಾಜ್ಯ ಪುರಾತತ್ವ ಇಲಾಖೆಗಳು ಜಂಟಿಯಾಗಿ ಕಾರ್ಯನಿರ್ವಹಿಸಲಿವೆ ಎಂದು ಇಂಧನ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು.

ನಗರದ ಹೊಸ ಮಲಪನಗುಡಿಯಲ್ಲಿನ ಹಂಪಿ ಹೆರಿಟೇಜ್ ರೆಸಾರ್ಟ್‌ನಲ್ಲಿ ಮಂಗಳವಾರ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಹಂಪಿಯ ಮೂಲಸೌಕರ್ಯಗಳ ಸುಧಾರಣೆಗೆ ಸಂಬಂಧಿಸಿದಂತೆ ಕೇವಲ ಪ್ರವಾಸೋದ್ಯಮ ಇಲಾಖೆಯಷ್ಟೇ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಿಲ್ಲ. ಇದರಲ್ಲಿ ಹಲವು ಇಲಾಖೆಗಳು ಭಾಗಿಯಾಗಿರುವುದರಿಂದ ಮುಂದಿನ ದಿನಗಳಲ್ಲಿ ನಗರಾಭಿವೃದ್ಧಿ ಸಚಿವರು ಹಾಗೂ ಪಂಚಾಯತ್ ರಾಜ್ ಸಚಿವರ ನೇತೃತ್ವದಲ್ಲಿ ಜಂಟಿ ಸಭೆಯೊಂದನ್ನು ಆಯೋಜಿಸಿ, ಇರುವ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲಾಗುವುದು. ಸದ್ಯ ಕೇಂದ್ರ ಸರ್ಕಾರದ ಜಂಟಿ ಕಾರ್ಯದರ್ಶಿಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳೊಂದಿಗೆ ಚರ್ಚಿಸಿ ಹಲವು ಪ್ರಮುಖ ಸಲಹೆ ಪಡೆಯಲಾಗಿದೆ ಎಂದರು.

ಗ್ಲೋಬಲ್ ಡೆಸ್ಟಿನೇಷನ್ ಡೆವಲಪ್‌ಮೆಂಟ್ ಯೋಜನೆಯಡಿ ರಾಜ್ಯಾದ್ಯಂತ ಒಟ್ಟು 50 ತಾಣಗಳ ಗುರಿ ಹೊಂದಲಾಗಿದ್ದರೂ, ಆರಂಭಿಕ ಹಂತದಲ್ಲಿ ಅತ್ಯಂತ ವ್ಯವಸ್ಥಿತವಾಗಿ 5 ರಿಂದ 10 ಪ್ರಮುಖ ತಾಣಗಳನ್ನು ಮಾತ್ರ ಆಯ್ದುಕೊಂಡು ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ. ಈ




ಮೊದಲ ಹಂತದ ಯಶಸ್ಸು ಇಡೀ ದೇಶದ ಪ್ರವಾಸೋದ್ಯಮದ ಭವಿಷ್ಯದ ದಿಕ್ಸೂಚಿಯಾಗಲಿದೆ. ಈ ನಿಟ್ಟಿನಲ್ಲಿ ಕರ್ನಾಟಕದ ಐತಿಹಾಸಿಕ ರಾಜಧಾನಿ ಹಂಪಿಗೆ ಪ್ರಥಮ ಆದ್ಯತೆ ನೀಡಲಾಗಿದೆ. ಹಂಪಿಯಲ್ಲಿ ಕಳೆದ 2–3 ವರ್ಷಗಳಿಂದಲೇ ಅತ್ಯಂತ ವಿವರವಾದ 'ಮಾಸ್ಟರ್ ಪ್ಲಾನ್' ಮತ್ತು ಸುಧಾರಿತ ಜಿಐಎಸ್ ತಂತ್ರಜ್ಞಾನ ಆಧಾರಿತ ಮ್ಯಾಪಿಂಗ್ ಕಾರ್ಯಗಳು ಪೂರ್ಣಗೊಳಿಸಲಾಗಿದೆ ಎಂದು ಮಾಹಿತಿ ನೀಡಿದರು.

3 ಸಾವಿರ ಕೋಟಿವರೆಗಿನ ಬೃಹತ್ ಹೂಡಿಕೆ ಮತ್ತು ಸಹಭಾಗಿತ್ವ: ಕೇಂದ್ರ ಸರ್ಕಾರವು ಈ ಯೋಜನೆಗೆ ಸುಮಾರು ರೂ.1,400 ರಿಂದ ರೂ. 1,500 ಕೋಟಿಗಳ ಮೂಲಭೂತ ಅನುದಾನದ ನೆರವು ನೀಡಲಿದೆ. ಖಾಸಗಿ ಹೂಡಿಕೆದಾರರು, ಸ್ಟೇಕ್‌ಹೋಲ್ಡರ್‌ಗಳು ಮತ್ತು ರಾಜ್ಯ ಸರ್ಕಾರಗಳ ಸಕ್ರಿಯ ಸಹಭಾಗಿತ್ವದೊಂದಿಗೆ ಒಟ್ಟು ಹೂಡಿಕೆಯನ್ನು ರೂ. 2,500 ರಿಂದ ರೂ. 3,000 ಕೋಟಿ ರೂಪಾಯಿಗಳಿಗೆ ಹೆಚ್ಚಿಸುವ ಬೃಹತ್ ಯೋಜನೆ ಇದಾಗಿದೆ.

ಇದರಿಂದ ಭಾರತೀಯ ಪ್ರವಾಸಿಗರು ವಿದೇಶ ಪ್ರವಾಸಗಳಿಗಾಗಿ ವಾರ್ಷಿಕವಾಗಿ ಬಿಲಿಯನ್ ಗಟ್ಟಲೆ ಹಣವನ್ನು ಖರ್ಚು ಮಾಡುತ್ತಿದ್ದಾರೆ. ಭಾರತದಲ್ಲೇ ಜಾಗತಿಕ ಗುಣಮಟ್ಟದ ಸೌಲಭ್ಯ ಸಿಕ್ಕರೆ, ಈ ದೇಶೀಯ ಪ್ರವಾಸಿಗರು ಭಾರತದಲ್ಲೇ ಉಳಿಯುವುದರಿಂದ ದೇಶದ ಆರ್ಥಿಕತೆಗೆ ಭಾರಿ ಲಾಭವಾಗಲಿದೆ. ಅದಲ್ಲದೇ ಪ್ರವಾಸೋದ್ಯಮದ ಈ ಬೃಹತ್ ಮೇಲ್ದರ್ಜೆಯಿಂದಾಗಿ ಪ್ರವಾಸಿ ಮಾರ್ಗದರ್ಶಿಗಳು, ಹೋಟೆಲ್ ಉದ್ಯಮ, ಸಾರಿಗೆ ವಲಯ ಮತ್ತು ಸ್ಥಳೀಯ ಕರಕುಶಲ ಕಲಾವಿದರಿಗೆ ಲಕ್ಷಾಂತರ ಹೊಸ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ಎಂದು ಆಶಯ ವ್ಯಕ್ತಪಡಿಸಿದರು.

ಪ್ರವಾಸಿ ಸೌಲಭ್ಯಗಳು ಮತ್ತು ಸಾರಿಗೆ ವ್ಯವಸ್ಥೆ : ಹಂಪಿಗೆ ಬರುವ ಪ್ರವಾಸಿಗರ ಅನುಕೂಲಕ್ಕಾಗಿ 20 ಪ್ರಮುಖ ಸ್ಥಳಗಳಲ್ಲಿ ಸಂಪೂರ್ಣ ಟ್ರಾವೆಲರ್ ರೂಟ್‌ಗಳನ್ನು ಗುರುತಿಸಲಾಗಿದ್ದು, ಸದ್ಯ 5 ರೂಟ್‌ಗಳು ಸಿದ್ಧವಾಗಿವೆ. ಪ್ರವಾಸಿಗರ ಸುಲಭ ಸಂಚಾರಕ್ಕೆ ಅನುವು ಮಾಡಿಕೊಡಲು ಪರಿಸರ ಸ್ನೇಹಿ ಇ–ವಾಹನಗಳ ಸಂಚಾರಕ್ಕೆ ಇಂದು ಸಾಂಕೇತಿಕವಾಗಿ 5 ಇ–ವಾಹನಗಳಿಗೆ ಶೀಘ್ರದಲ್ಲೇ ಚಾಲನೆ ನೀಡಲಾಗುವುದು. ಪ್ರವಾಸಿಗರು ಬೆಳಿಗ್ಗೆ ಬೇಗನೆ ಹಂಪಿಗೆ ಆಗಮಿಸುವುದರಿಂದ, ಅವರ ಅನುಕೂಲಕ್ಕಾಗಿ ಮುಂಜಾನೆ 4 ಗಂಟೆಯಿಂದಲೇ ವಿಶೇಷ ಸಾರಿಗೆ ಬಸ್‌ಗಳ ಸೌಲಭ್ಯವನ್ನು ಕಲ್ಪಿಸುವ ಕುರಿತು ಸಾರಿಗೆ ಇಲಾಖೆಯೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಹಂಪಿಯಲ್ಲಿ ಕಾಂಕ್ರೀಟ್ ಕಾಮಗಾರಿಗಳನ್ನು ಕೈಗೊಳ್ಳದಂತೆ ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆಯ ಕಠಿಣ ನಿಯಮಗಳಿವೆ. ಆದಾಗ್ಯೂ, ಪ್ರವಾಸಿಗರು ಹಾಗೂ ಭಕ್ತರ ಅನುಕೂಲಕ್ಕಾಗಿ ನದಿಯ ಸ್ನಾನಘಟ್ಟದ ಬಳಿ ಅಗತ್ಯ ಸುರಕ್ಷತಾ ಕ್ರಮಗಳು ಹಾಗೂ ಮೂಲಸೌಕರ್ಯಗಳನ್ನು ಒದಗಿಸುವ ಬಗ್ಗೆ ಎ.ಎಸ್.ಐ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ ಸೂಕ್ತ ವ್ಯವಸ್ಥೆ ಮಾಡಲಾಗುವುದು. ವಿಜಯನಗರದ ಇತಿಹಾಸ ಬಿಂಬಿಸುವ ಕಲ್ಯಾಣಿ ಹಾಗೂ ಪ್ರಮುಖ ಸ್ಮಾರಕಗಳ ಪುನಶ್ಚೇತನ ಕಾಮಗಾರಿಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಲು ಪ್ರಗತಿ ಪರಿಶೀಲನೆ ನಡೆಸಲಾಗುವುದು ಎಂದರು.

ಮೈಸೂರು ದಸರಾದಂತೆ ಹಂಪಿ ಉತ್ಸವಕ್ಕೂ ತನ್ನದೇ ಆದ ಐತಿಹಾಸಿಕ ಹಿನ್ನೆಲೆಯಿದೆ. ಹಂಪಿ ಉತ್ಸವದ ದಿನಾಂಕ ನಿಗದಿ ಹಾಗೂ ಅದರ ವ್ಯವಸ್ಥಿತ ಆಚರಣೆಯ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಶೀಘ್ರದಲ್ಲೇ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು. ಕೋವಿಡ್ ನಂತರದ ದಿನಗಳಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳು ಚುರುಕುಗೊಳ್ಳುತ್ತಿದ್ದು, ಸ್ಥಳೀಯ ಉದ್ಯಮಗಳಿಗೆ ಆಸರೆಯಾಗುವ ನಿಟ್ಟಿನಲ್ಲಿ ಉತ್ಸವವನ್ನು ಯಶಸ್ವಿಯಾಗಿ ಆಯೋಜಿಸಲು ಸರ್ಕಾರ ಬದ್ಧವಾಗಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.

# ಸಮ ಸಮಾಜ ನಿರ್ಮಾಣ ಕಾರ್ಯಕ್ರಮ : ನಟ ಚೇತನ್‌ಗೆ ಅದ್ಧೂರಿ ಸ್ವಾಗತ

**▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಸಮ ಸಮಾಜ ನಿರ್ಮಾಣ ಕಾರ್ಯಕ್ರಮದ ಅಂಗವಾಗಿ ಬಳ್ಳಾರಿಗೆ ಆಗಮಿಸಿದ ಕನ್ನಡ ಚಿತ್ರರಂಗದ ಖ್ಯಾತ ನಟ ಹಾಗೂ ಸಾಮಾಜಿಕ ಹೋರಾಟಗಾರ ಚೇತನ್ ಅಹಿಂಸಾ ಅವರಿಗೆ ಬಳ್ಳಾರಿ ನಗರ ಹಾಗೂ ಗ್ರಾಮಾಂತರ ಭಾಗದ ಯುವಕರು ಅದ್ದೂರಿಯಾಗಿ ಸ್ವಾಗತ ಕೋರಿದರು.

ಸಮ ಸಮಾಜ ನಿರ್ಮಾಣದ ಆಶಯವನ್ನು ಜನಸಾಮಾನ್ಯರ ನಡುವೆ ತಲುಪಿಸುವ ಉದ್ದೇಶದಿಂದ ಆಯೋಜಿಸಲಾದ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ನಟ ಚೇತನ್ ಅವರು ಬಳ್ಳಾರಿಗೆ ಆಗಮಿಸಿದ್ದರು. ಈ ವೇಳೆ ಎ.ಎಸ್. ವಸಂತ್ ಕುಮಾರ್ ಅವರ ನೇತೃತ್ವದಲ್ಲಿ ನೂರಾರು ಯುವಕರು ಹೂಮಾಲೆ ಹಾಕಿ, ಹೂಗುಚ್ಛ ನೀಡಿ, ಘೋಷಣೆಗಳನ್ನು ಕೂಗಿ ಆತ್ಮೀಯವಾಗಿ ಬರಮಾಡಿಕೊಂಡರು.

ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಸಮಾನತೆ, ಸಾಮಾಜಿಕ ನ್ಯಾಯ ಹಾಗೂ




ಸಂವಿಧಾನದ ಆಶಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಅಗತ್ಯವನ್ನು ಪ್ರತಿಪಾದಿಸುವ ಉದ್ದೇಶದಿಂದ ಸಮ ಸಮಾಜ ನಿರ್ಮಾಣ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಸಮಾಜದಲ್ಲಿ ಜಾತಿ, ಧರ್ಮ, ವರ್ಗಭೇದಗಳನ್ನು ಮೀರಿ ಮಾನವೀಯತೆ, ಸಮಾನ ಅವಕಾಶ ಹಾಗೂ ಸಹೋದರತ್ವದ ಮೌಲ್ಯಗಳನ್ನು ಬೆಳೆಸುವ ನಿಟ್ಟಿನಲ್ಲಿ ಯುವಜನರು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕೆಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಕಾರ್ಯಕ್ರಮದಲ್ಲಿ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಕೈಜೋಡಿಸಿದರು. ನಟ ಚೇತನ್ ಅವರ ಆಗಮನದಿಂದ ಯುವಕರಲ್ಲಿ ಉತ್ಸಾಹದ ವಾತಾವರಣ ನಿರ್ಮಾಣವಾಗಿದ್ದು, ಅನೇಕರು ಅವರೊಂದಿಗೆ ಮಾತುಕತೆ ನಡೆಸಿ ಶುಭಾಶಯ ಕೋರಿದರು.

ಈ ಸಂದರ್ಭದಲ್ಲಿ ಎರಗುಡಿ ಶಿವಶಂಕರ್, ಬಾಪೂಜಿ ನಗರ ರಾಮಕೃಷ್ಣ, ಕೆಎಂಆರ್‌ವಿ ಗೌರವಾಧ್ಯಕ್ಷ ಹಾಗೂ ಸಮಾಜಸೇವಕ ಹುಸೇನಪ್ಪ, ಭೀಮ್ ಆರ್ಮಿ ಜಿಲ್ಲಾಧ್ಯಕ್ಷ ವೆಂಕಟೇಶ್, ಕಂಪ್ಲಿ ಮಲ್ಲಿಕಾರ್ಜುನ, ಕೌಲ್ ಬಜಾರ್ ಉಮೇಶ್, ಹೊಸಪೇಟೆ ಶಂಕರ್, ಗ್ರಾಮ ಪಂಚಾಯಿತಿ ಸದಸ್ಯರಾದ ಶಿವಣ್ಣ, ಹುಲಿಯಪ್ಪ, ಪ್ರತಾಪ, ಬಸನಕುಂಟೆ ಎರಿಸ್ವಾಮಿ, ತೋರಣಗಲ್ ಕುಮಾರ್, ಪೇಂಟರ್ ಆನಂದ, ಕಾರ್ಮಿಕ ಸಂಘದ ಅಧ್ಯಕ್ಷ ದುರ್ಗೇಶ್ ಸೇರಿದಂತೆ ಬಳ್ಳಾರಿ ನಗರ ಹಾಗೂ ಗ್ರಾಮಾಂತರ ಭಾಗದ ಅನೇಕ ಯುವಕರು ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಮೆರುಗು ತಂದರು.

# ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಯುವ ಪೀಳಿಗೆಗೆ ಆರೋಗ್ಯ ಶಿಕ್ಷಣ ಅವಶ್ಯ



**▪ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**

ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ಯುವ ಪೀಳಿಗೆಗೆ ಆರೋಗ್ಯ ಶಿಕ್ಷಣ ಅವಶ್ಯ ಎಂದು ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಹೇಳಿದರು.

ಚಿತ್ರದುರ್ಗ ತಾಲೂಕಿನ ಭೀಮಸಮುದ್ರ ಗ್ರಾಮದ ಭೀಮೇಶ್ವರ ಪ್ರೌಢಶಾಲೆಯಲ್ಲಿ ಮಂಗಳವಾರ ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ಮತ್ತು ಭೀಮಸಮುದ್ರ ಪ್ರಾಥಮಿಕ ಆರೋಗ್ಯ ಕೇಂದ್ರ ವತಿಯಿಂದ ವಿಶ್ವ ಜನಸಂಖ್ಯಾ ದಿನಾಚರಣೆ ಪ್ರಯುಕ್ತ ಆಯೋಜಿಸಿದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಶ್ವದ ಜನಸಂಖ್ಯೆ 1989 ಜುಲೈ 11ರಂದು 500 ಕೋಟಿ ತಲುಪಿದ ದಿನ ಅಂದಿನಿಂದ ಜನಸಂಖ್ಯಾ ಸ್ಫೋಟದಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ವಿಶ್ವ ಜನಸಂಖ್ಯಾ ದಿನಾಚರಣೆಯನ್ನು ಪ್ರತಿವರ್ಷ ಜುಲೈ 11ರಂದು ಆಚರಿಸಲಾಗುತ್ತದೆ. ಜನಸಂಖ್ಯಾ ಸ್ಫೋಟದಿಂದ ನೈಸರ್ಗಿಕ ಸಂಪನ್ಮೂಲಗಳ ಮೇಲೆ ಅಪಾರ ಒತ್ತಡ ಉಂಟಾಗುತ್ತದೆ ಬಡತನ, ನಿರುದ್ಯೋಗ, ಪರಿಸರ ಮಾಲಿನ್ಯ ಮತ್ತು ಅರಣ್ಯನಾಶ ಮುಂತಾದ ಸಮಸ್ಯೆಗಳು ಹೆಚ್ಚುತ್ತವೆ. ಜನಸಂಖ್ಯಾ ಸ್ಥಿರತೆ ಕಾಪಾಡಲು ಜನಸಂಖ್ಯಾ ಸ್ಫೋಟದಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿ ದೆಸೆಯಲ್ಲಿಯೇ ಆರೋಗ್ಯ ಶಿಕ್ಷಣ ನೀಡುವ ಮುಖಾಂತರ ಜನಸಂಖ್ಯಾ ನಿಯಂತ್ರಣದ ಜೊತೆಗೆ ಆರೋಗ್ಯವಂತ ಸಮಾಜ ನಿರ್ಮಾಣ ಮಾಡಬಹುದು ಎಂದರು.

ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ. ಬಾಲ್ಯ ವಿವಾಹಕ್ಕೆ ಆಸ್ಪದ ಕೊಡಬೇಡಿ, ಇಳಿ ವಯಸ್ಸಿನಲ್ಲಿ ವಿವಾಹವಾಗಿ ಆ ತಾಯಿ ಗರ್ಭಿಣಿಯಾದರೆ ಹೆರಿಗೆ ಸಮಯದಲ್ಲಿ ಗಂಡಾಂತರ ಎದುರಿಸಬೇಕಾಗುತ್ತದೆ. ಬಾಲ್ಯ ವಿವಾಹದ ಸುಳಿವು ಸಿಕ್ಕಲ್ಲಿ 1098ಕ್ಕೆ ಕರೆ ಮಾಡಿ, ಕರೆ ಮಾಡಿದವರ ಹೆಸರನ್ನು ಗೌಪ್ಯವಾಗಿ ಇಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಉಚಿತ ಆರೋಗ್ಯ ಸಹಾಯವಾಣಿ 104ಕ್ಕೆ ಕರೆ ಮಾಡಬಹುದು ಎಂದರು.

ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ನಾಗರತ್ನಮ್ಮ ಮಾತನಾಡಿ ಆರೋಗ್ಯವೇ ಮಹಾಭಾಗ್ಯ ಆರೋಗ್ಯ ಹೊಂದಿದ್ದರೆ ಏನೆಲ್ಲಾ ಸಂಪಾದನೆ ಮಾಡಬಹುದು ಶೈಕ್ಷಣಿಕ ಅಭಿವೃದ್ಧಿಗೆ ಆರೋಗ್ಯ ಅಭಿವೃದ್ಧಿ ಬಹು ಮುಖ್ಯ ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿ ಜಿ.ರವಿ ಮಾತನಾಡಿ, ಪರಿಸರ ಸ್ವಚ್ಛತೆಗೆ ಆದ್ಯತೆ ನೀಡಿ ಸಾಂಕ್ರಾಮಿಕ ರೋಗಗಳಾದ ಡೆಂಗ್ಯೂ ಚಿಕನ್ ಗುನ್ಯಾ ಬಗ್ಗೆ ಮಾಹಿತಿ ನೀಡುತ್ತಾ ಮಳೆಗಾಲವಾದ್ದರಿಂದ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿಸಿ ಸೊಳ್ಳೆ ಕಚ್ಚಿಸಿಕೊಳ್ಳದಂತೆ ನಿಗಾ ವಹಿಸಿ ಸೊಳ್ಳೆಯಿಂದ ಹರಡುವ ರೋಗಗಳಿಗೆ ಕಡಿವಾಣ ಹಾಕಬೇಕು ಎಂದರು.

ವಿದ್ಯಾರ್ಥಿಗಳು ಇಂತಹ ಆರೋಗ್ಯ ಕಾರ್ಯಕ್ರಮಗಳಲ್ಲಿ ಆರೋಗ್ಯ ಶಿಕ್ಷಣ ಪಡೆದು ಪೋಷಕರಿಗೆ ಮತ್ತು ಸಮುದಾಯಕ್ಕೆ ಮಾಹಿತಿ ನೀಡಿ, ಸ್ವಚ್ಛ ಭಾರತ ನಿರ್ಮಾಣ ಮಾಡುವ ಮೂಲಕ ದೇಶಾಭಿವೃದ್ಧಿಗೆ ನಾವುಗಳು ಕೈಜೋಡಿಸೋಣ ಎಂದು ಶಿಕ್ಷಕ ಪ್ರದೀಪ್ ಮಾಹಿತಿ ನೀಡಿದರು. ಈ ವೇಳೆ ಶಿಕ್ಷಕರಾದ ಗಿರೀಶ್ ಮತ್ತು ಸುಮಾ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

## ಹೈಕೋರ್ಟ್ ಮುಖ್ಯ ನ್ಯಾಯ ಮೂರ್ತಿಗಳಿಂದ ಜಿಲ್ಲಾ ಕೋರ್ಟ್ ಸಂಕೀರ್ಣ ಕಾಮಗಾರಿ ಪರಿಶೀಲನೆ



**▪ ಗಣಿನಾಡವಾಣಿ ವಾರ್ತೆ, ದಾವಣಗೆರೆ**

ದಾವಣಗೆರೆ ಜಿಲ್ಲಾ ನ್ಯಾಯಾಲಯದ ಸಂಕೀರ್ಣದ ನೂತನ ಕಟ್ಟಡವನ್ನು ಕುಂದುವಾಡ ಬಳಿ ನಿರ್ಮಾಣ ಮಾಡುತ್ತಿದ್ದು ಕಾಮಗಾರಿಯನ್ನು ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳಾದ ವಿಭು ಬಖ್ರೂ ಅವರು ಮಂಗಳವಾರ ಪರಿಶೀಲನೆ ನಡೆಸಿದರು.

ಜಿಲ್ಲಾ ನ್ಯಾಯಾಲಯದ ಎಲ್ಲಾ ಹಂತದ ಕೋರ್ಟ್‌ಗಳಿಗೆ ಅಗತ್ಯವಿರುವ ಕಟ್ಟಡದ ಸಂಕೀರ್ಣ ಇದಾಗಿದ್ದು ಸುಮಾರು ರೂ.25 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿದೆ. ಕಟ್ಟಡ ನೆಲ ಮಹಡಿ ಮತ್ತು 2 ಅಂತಸ್ತನ್ನು ಹೊಂದಿದ್ದು ಪೂರ್ಣ ಹಂತಕ್ಕೆ ತಲುಪಿದೆ, ಪ್ಲೋರಿಂಗ್ ಕಾಮಗಾರಿ ನಡೆಯುತ್ತಿದೆ.

ಮುಖ್ಯ ನ್ಯಾಯಮೂರ್ತಿ ಅವರು ಕಟ್ಟಡದ ಪ್ಲಾನ್ ಮತ್ತು ಕೋರ್ಟ್ ಕಾರ್ಯ, ಕಲಾಪಗಳಿಗೆ ಅಗತ್ಯವಿರುವ ಸ್ಥಳಾವಕಾಶದ ಬಗ್ಗೆ ಪರಿಶೀಲನೆ ನಡೆಸಿದರು. ನಿರ್ಮಾಣವಾಗುತ್ತಿರುವ ಕಟ್ಟಡದಲ್ಲಿ 15 ಕೋರ್ಟ್ ಹಾಲ್‌ಗಳನ್ನು ನಿರ್ಮಾಣ ಮಾಡಲಾಗಿದೆ.

ಈ ವೇಳೆ ಹೈಕೋರ್ಟ್ ನ್ಯಾಯಮೂರ್ತಿಗಳು ಹಾಗೂ ಜಿಲ್ಲಾ ಆಡಳಿತಾತ್ಮಕ ನ್ಯಾಯಾಧೀಶರಾದ ರವಿ ವಿ.ಹೊಸಮನಿ, ಹೈಕೋರ್ಟ್ ರಿಜಿಸ್ಟ್ರಾರ್ ಜನರಲ್ ಚಂದ್ರಶೇಖರ ರೆಡ್ಡಿ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ವೇಲಾ ಡಿ.ಕೆ ಹಾಗೂ ವಿವಿಧ ನ್ಯಾಯಾಧೀಶರು, ಅಧಿಕಾರಿಗಳು ಉಪಸ್ಥಿತರಿದ್ದರು.

## ಜಲಸಂಪನ್ಮೂಲ ಇಲಾಖೆ ಕಿರಿಯ ಇಂಜಿನಿಯರ್ ಹುದ್ದೆಗಳ ಅಂತಿಮ ಆಯ್ಕೆಪಟ್ಟಿ ಪ್ರಕಟ

**▪ ಗಣಿನಾಡವಾಣಿ ವಾರ್ತೆ, ಬೆಂಗಳೂರು**

ಕರ್ನಾಟಕ ಲೋಕಸೇವಾ ಆಯೋಗವು ಅಧಿಸೂಚಿಸಿದ್ದ ಜಲಸಂಪನ್ಮೂಲ ಇಲಾಖೆಯಲ್ಲಿನ ಕಿರಿಯ ಇಂಜಿನಿಯರ್ (ಸಿವಿಲ್) 216+54 (ಸೇವಾನಿರತ ಅಭ್ಯರ್ಥಿಗಳು) ಹುದ್ದೆಗಳ ಅಂತಿಮ ಆಯ್ಕೆಪಟ್ಟಿ ಮತ್ತು ಕಟ್–ಆಫ್ ಅಂಕಗಳನ್ನು ಜುಲೈ 3 ರಂದು ಆಯೋಗದ ವೆಬ್‌ಸೈಟ್ http://kpsc.kar.nic.in/Lists ನಲ್ಲಿ ಪ್ರಕಟಿಸಲಾಗಿದೆ ಎಂದುಆಯೋಗದ ಕಾರ್ಯದರ್ಶಿಗಳು ತಿಳಿಸಿದ್ದಾರೆ.

GANINAADA VAANI KANNADA DAILY MORNING OWNER , PUBLISHER, PRINTED BY Editor name : A.K.MALLIKARJUNA: HOUSE NO 84, WARD NO 22, MAHANANDI KOTTAM STREET, TALURU ROAD, AMBEDKARNAGAR, GANDHI NAGAR, BELLARY, KARNATAKA - 583101. Printed at PENNAOBALESHWARA ENTERPRISES#237, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583113.